# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 79 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 09-10-2024 ಬುಧವಾರ | ಪುಟ: 4 | ಬೆಲೆ : ರೂ.2-00
Volume - 02 Issue - 79 | RNI No: KARKAN/2023/88462 | Chitradurga | Date: 09-10-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದಸರಾ: ದುರ್ಗದಲ್ಲೊಂದು ಬೊಂಬೆಗಳ ಮನೆ 2

ಬಿಜೆಪಿ ನಗರ ಘಟಕ ಸದಸ್ಯತ್ವ ಅಭಿಯಾನಕ್ಕೆ ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಚಾಲನೆ 3

ಬದುಕು ಬಿಟ್ಟು ಯೋಗವಿಲ್ಲ, ಯೋಗ ಬಿಟ್ಟು ಬದುಕು ಇಲ್ಲ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಿಟಿ ಇನ್‌ಸ್ಟ್ಯೂಟ್: ಕರಡು ಮತದಾರರ ಪಟ್ಟಿ ಪ್ರಕಟ

» **ಚಿತ್ರದುರ್ಗ**

ಚಿತ್ರದುರ್ಗ ಸಿಟಿ ಇನ್‌ಸ್ಟ್ಯೂಟ್ ಆಡಳಿತ ಮಂಡಳಿಯ ಮುಂದಿನ ಐದು (5) ವರ್ಷಗಳ ಅವಧಿಗೆ ಸಾಮಾನ್ಯ ಚುನಾವಣೆಯನ್ನು ನಿಗಧಿಪಡಿಸಬೇಕಾಗಿದ್ದು, ಈ ಚುನಾವಣೆ ಸಂಬಂಧ 2024ರ ಆಗಸ್ಟ್ 31ರ ಅಂತ್ಯಕ್ಕೆ ಇದ್ದಂತೆ ಅರ್ಹ ಹಾಗೂ ಅನರ್ಹ ಸಾಮಾನ್ಯ ಸದಸ್ಯರ ಕರಡುಪಟ್ಟಿ, ಅರ್ಹ ಅಜೀವ ಹಾಗೂ ಅನರ್ಹ ಅಜೀವ ಸದಸ್ಯರ ಕರಡುಪಟ್ಟಿ ಹಾಗೂ ಮತದಾರರ ಪಟ್ಟಿಯನ್ನು ಸಿದ್ದಪಡಿಸುವಾಗ ಪರಿಗಣಿಸದೇ ಇರುವವರ ಪಟ್ಟಿಗಳ ಕರಡು ಮತದಾರರ ಪಟ್ಟಿಗಳನ್ನು ನೋಡಲ್ ಅಧಿಕಾರಿಗಳು ಹಾಗೂ ಚಿತ್ರದುರ್ಗ ಸಹಕಾರ ಸಂಘಗಳ ಉಪನಿಬಂಧಕರು ಸಲ್ಲಿಸಿದ್ದು, ಈ ಕರಡು ಮತದಾರರ ಪಟ್ಟಿಯನ್ನು ಚಿತ್ರದುರ್ಗ ಸಿಟಿ ಇನ್‌ಸ್ಟ್ಯೂಟ್ ಸೂಚನಾ ಫಲಕದಲ್ಲಿ ಅ.07ರಂದು ಪ್ರಕಟಿಸಲಾಗಿದೆ. ಕರಡು ಮತದಾರರ ಪಟ್ಟಿಗಳಿಗೆ ಆಕ್ಷೇಪಣೆಗಳು ಇದ್ದಲ್ಲಿ, ಆಕ್ಷೇಪಣೆಗಳನ್ನು ಸಮರ್ಥನೀಯ ದಾಖಲೆಗಳೊಂದಿಗೆ ಸಿಟಿ ಇನ್‌ಸ್ಟ್ಯೂಟ್ ವ್ಯವಸ್ಥಾಪಕರಿಗೆ ಅಥವಾ ಆಡಳಿತಾಧಿಕಾರಿಗಳಿಗೆ ಲಿಖಿತವಾಗಿ ಇದೇ ಅ.21ರ ಸಂಜೆ 5.30 ರೊಳಗೆ ಸಲ್ಲಿಸುವಂತೆ ಆಡಳಿತಾಧಿಕಾರಿಗಳು ಸೂಚಿಸಿದ್ದಾರೆ.

### ಲಿಡ್ಕರ್: ವಿವಿಧ ಯೋಜನೆಗಳಿಗೆ ಅರ್ಜಿ

» **ಚಿತ್ರದುರ್ಗ**

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ 2024-25ನೇ ಸಾಲಿಗೆ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅರ್ಹ ಚರ್ಮಕುಶಲಕರ್ಮಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 06 ರಿಂದ ಅರ್ಜಿ ಸಲ್ಲಿಕೆ ಪ್ರಾರಂಭವಾಗಿದ್ದು, ಅ.30ರೊಳಗೆ ಸೇವಾ ಸಿಂಧು ಪೋರ್ಟಲ್, ಕರ್ನಾಟಕ ಒನ್, ಗ್ರಾಮ ಒನ್‌ನ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಸಲ್ಲಿಸಿದ ಅವಶ್ಯದಾಖಲಾತಿಗಳೊಂದಿಗೆ ಅರ್ಜಿಗಳನ್ನು ಜಿಲ್ಲಾ ಸಂಯೋಜಕರ ಕಚೇರಿಗೆ ಸಲ್ಲಿಸಬೇಕಾಗಿದೆ. ಕಾಯಕ ಸ್ಪೂರ್ತಿ ಯೋಜನೆ, ಪಾದುಕೆ ಕುಟೀರ ಯೋಜನೆ, ಮಾರುಕಟ್ಟೆ ಸಹಾಯ ಯೋಜನೆ, ಚರ್ಮಶಿಲ್ಪಿ ಯೋಜನೆ, ವಸತಿ ಕಾರ್ಯಾಗಾರ ಯೋಜನೆ, ಸ್ವಾವಲಂಬಿ/ಸಂಚಾರಿ ಮಾರಾಟ ಮಳಿಗೆ ಯೋಜನೆ, ನೇರಸಾಲ ಯೋಜನೆ ಹಾಗೂ ಕೌಶಲ್ಯ ಉನ್ನತೀಕರಣ ಯೋಜನೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಚಿತ್ರದುರ್ಗ ನಗರದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರ ಹತ್ತಿರದ ಲಿಡ್‌ಕರ್ ನಿಗಮ ಜಿಲ್ಲಾ ಸಂಯೋಜಕರು 9449181136 ಗೆ ಸಂಪರ್ಕಿಸಬಹುದು ಎಂದು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಬಾಲ್ಯ ವಿವಾಹ ಪ್ರಕರಣ: ಎಫ್‌ಐಆರ್ ದಾಖಲು

» **ಚಿತ್ರದುರ್ಗ**

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಕಾವಲು ಚೌಡಮ್ಮ ದೇವಸ್ಥಾನದಲ್ಲಿ ರಂಗವ್ವನಹಳ್ಳಿ ಗ್ರಾಮದ ಅಪ್ರಾಪ್ತ ಬಾಲಕಿಯನ್ನು ಮದುವೆಯಾದ ಸೋಮಗುದ್ದು ಗ್ರಾಮದ ಎಂ.ಲಿಂಗರಾಜು ಎಂಬುವವರ ವಿರುದ್ದ ಬಾಲ್ಯ ವಿವಾಹ ಪ್ರಕರಣ ದಾಖಲಾಗಿದೆ. ಬಾಲ್ಯ ವಿವಾಹ ಕುರಿತು ಮಾಹಿತಿ ತಿಳಿದು ಬಂದ ಕೂಡಲೇ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಎಂ.ಲಿಂಗರಾಜು ವಿರುದ್ದ ಪೋಕ್ಸೋ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ ಅ.4 ರಂದು ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಸಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ತಿಳಿಸಿದ್ದಾರೆ.

### ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಆಚರಿಸುವ ಸಂಬಂಧ ಅ.15 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವ ಸಿದ್ದತಾ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿಗಳು ಸಭೆಯ ಅಧ್ಯಕ್ಷತೆ ವಹಿಸುವರು. ಸಮಾಜದ ಮುಖಂಡರು, ಸಾರ್ವಜನಿಕರು, ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಗೆ ಹಾಜರಾಗಿ ಸಲಹೆ ಸೂಚನೆ ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಸೂಚನೆ

# ಅರ್ಹರಿಗೆ ಗ್ಯಾರಂಟಿ ಲಾಭ ತಲುಪಿಸಿ

» **ಚಿತ್ರದುರ್ಗ**

ಗ್ಯಾರಂಟಿ ಯೋಜನೆಗಳಿಂದ ಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಗಳ ಲಾಭ ತಲುಪಿಸಲು ಪ್ರಯತ್ನಿಸುವಂತೆ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಪಂಚ ಗ್ಯಾರಂಟಿ ಯೋಜನೆಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಡ ಜನರ ಏಳಿಗೆಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳು ಸಮಾಜದ ಎಲ್ಲ ಅರ್ಹ ಫಲಾನುಭವಿಗಳಿಗೆ ದೊರಕಬೇಕು. ಜಿಲ್ಲೆಯಲ್ಲಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಸಾವಿರಾರು ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಈ ಕುರಿತು ಸಾರ್ವಜನರಿಗೆ ಹೆಚ್ಚಿನ ಮಾಹಿತಿ ದೊರಕುವಂತಾಗಬೇಕು ಎಂದರು.

ತಿಂಗಳ ಪ್ರಗತಿ ವಿವರ ಪ್ರದರ್ಶಿಸಿ :ಗೃಹಲಕ್ಷ್ಮೀ ಹಾಗೂ ಅನ್ನಭಾಗ್ಯ ಯೋಜನೆಗಳ ಮೂಲಕ ಜಿಲ್ಲೆಯ ಲಕ್ಷಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ವರ್ಗಾವಣೆ ಮಾಡಲಾಗುತ್ತಿದೆ. ಈ ಯೋಜನೆಗಳ ಅಡಿ ಪ್ರತಿ ತಿಂಗಳು ಫಲಾನುಭವಿಗಳ ಖಾತೆಗೆ ಜಮೆ ಮಾಡಿದ ಹಣ, ಫಲಾನುಭವಿಗಳ ಸಂಖ್ಯೆಗಳ ಸಂಕ್ಷಿಪ್ತ ಪ್ರಗತಿ ವಿವರನ್ನು ಜಿಲ್ಲೆಯ ಎಲ್ಲ ಅಂಗನವಾಡಿ ಹಾಗೂ ನ್ಯಾಯಬೆಲೆ ಅಂಗಡಿಗಳ ಮುಂದಿನ ಫಲಕಗಳಲ್ಲಿ ಬರೆದು ಪ್ರದರ್ಶಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು.

ಪ್ರತಿ ತಿಂಗಳು ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ ಪ್ರಯಾಣಿಸಿದ ಮಹಿಳಾ ಫಲಾನುಭವಿಗಳು ಹಾಗೂ ಸರ್ಕಾರದಿಂದ ಪಾವತಿಸಿದ ಮೊತ್ತದ ವಿವರಗಳನ್ನು ಕ್ರೂಢಿಕರಿಸಿ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು ದಿನಪತ್ರಿಕೆಗಳಲ್ಲಿ ಪ್ರಚುರ ಪಡಿಸಬೇಕು. ಗ್ಯಾರಂಟಿ ಯೋಜನೆಗಳ ಕುರಿತು ಬಸ್ ನಿಲ್ದಾಣಗಳಲ್ಲಿ ಆಡಿಯೋ ಹಾಗೂ ವಿಡಿಯೋ ಜಿಂಗಲ್ಸ್‌ಗಳನ್ನು ಪ್ರದರ್ಶಿಸಲು ಕ್ರಮಕೈಗೊಳ್ಳಬೇಕು.

ಗೃಹಜ್ಯೋತಿಯೋಜನೆಫಲಾನುಭವಿಗಳ ವಿವರ ಹಾಗೂ ಯೋಜನೆಯಡಿ ಇದರವರೆಗೂ ಸರ್ಕಾರದಿಂದ ಭರಿಸಿರುವ ಒಟ್ಟು ಮೊತ್ತದ ವಿವರಗಳನ್ನು ಪ್ರತಿ ಬೆಸ್ಕಾಂ ಕಚೇರಿಗಳ ಸೂಚನಾ ಫಲಕಗಳಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಪ್ರಕಟಿಸಬೇಕು. ಇದರೊಂದಿಗೆ ಬೆಸ್ಕಾಂ ಮಾಹಿತಿ ಶಿಕ್ಷಣ ಕಾರ್ಯಕ್ರಮಗಳಲ್ಲಿ ಕೂಡ ಯೋಜನೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು.




### ಗೃಹಲಕ್ಷ್ಮೀ: ರೂ.783 ಕೋಟಿ ಜಮೆ

ಚಿತ್ರದುರ್ಗ ಜಿಲ್ಲೆಯಲ್ಲಿ 4,05,282 ಪಡಿತರ ಚೀಟಿಗಳು ಇದ್ದು, ಇದರಲ್ಲಿ 3,83,537 ಫಲಾನುಭವಿಗಳುಗೃಹಲಕ್ಷ್ಮೀಯೋಜನೆಯಡಿನೊಂದಣಿಯಾಗಿರುತ್ತಾರೆ.ಇದವರೆಗೂ ಜಿಲ್ಲೆಯ ಅರ್ಹ ಮಹಿಳಾ ಫಲಾನುಭವಿಗಳ ಖಾತೆಗೆ ರೂ.783,27,70,000 ಜಮೆ ಮಾಡಲಾಗಿದೆ. ಇ-ಕೆವೈಸಿ ಹಾಗೂ ಎನ್.ಪಿ.ಸಿ.ಐ ಮ್ಯಾಪಿಂಗ್ ವಿಫಲತೆ ಕಾರಣ 2,552 ಫಲಾನುಭವಿಗಳು ಹಾಗೂ 426 ಫಲಾನುಭವಿಗಳ ಬ್ಯಾಂಕ್ ಖಾತೆ ನಿಷ್ಕ್ರಿಯಗೊಂಡ ಕಾರಣ ಇವರ ಖಾತೆಗಳಿಗೆ ಹಣ ಜಮೆಯಾಗಿರುವುದಿಲ್ಲ. ಜಿಲ್ಲೆಯಲ್ಲಿ 721 ಫಲಾನುಭವಿಗಳು ಜಿ.ಎಸ್.ಟಿ ಹಾಗೂ ಐಟಿ ಪಾವತಿ ಮಾಡಿರುವ ಕಾರಣದಿಂದ ಯೋಜನೆ ಲಾಭ ಪಡೆಯುವಲ್ಲಿ ವಂಚಿತರಾಗಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸಭೆಯಲ್ಲಿ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಬಾಕಿ ಉಳಿದ 18,702 ಪಡಿತರ ಕಾರ್ಡು ಹೊಂದಿರುವವರ ಪೈಕಿ ಅರ್ಹರನ್ನು ಗುರುತಿಸಿ ಯೋಜನೆಯಡಿ ನೊಂದಣಿ ಮಾಡಲು ಕ್ರಮ ಕೈಗೊಳ್ಳಬೇಕು. 10 ದಿನಗಳ ಒಳಗಾಗಿ ನೊಂದಣಿಯಾಗದವರ ವಿವರಗಳನ್ನು ತಾಲ್ಲೂಕು ಹಾಗೂ ಗ್ರಾಮವಾರು ಸಿದ್ದಪಡಿಸಿ ಅನುಷ್ಠಾನ ಸಮಿತಿಗೆ ನೀಡಬೇಕು. ತಾಲ್ಲೂಕು ಹಂತದಲ್ಲಿ ತಾಲ್ಲೂಕು ಪಂಚಾಯಿತಿ ಇಓ ಹಾಗೂ ಸಿಡಿಪಿಓಗಳ ಸಮಿತಿ ರಚಿಸಿ ಒಂದು ತಿಂಗಳ ಒಳಗಾಗಿ ಇ-ಕೆವೈಸಿ ಹಾಗೂ ಎನ್.ಪಿ.ಸಿ.ಐ ಮ್ಯಾಪಿಂಗ್ ಮಾಡಲು ಕ್ರಮ ಕೈಗೊಳ್ಳುವಂತೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಸೂಚಿಸಿದರು.

ಯುವನಿಧಿ ಯೋಜನೆಯು ಜಿಲ್ಲೆಯಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು,ಜಿಲ್ಲೆಯಎಲ್ಲಾಪದವಿ ಹಾಗೂ ಡಿಪ್ಲೋಮೋ ಕಾಲೇಜುಗಳಲ್ಲಿ ಜಾಗೃತಿ ಆಂದೋಲನ ಏರ್ಪಡಿಸಬೇಕು. ಹೆಚ್ಚು ಯುವಕರು ಯುವನಿಧಿಯ ಸೌಲಭ್ಯ ಪಡೆದುಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಹೇಳಿದರು.

**ಕಚೇರಿ ಸ್ಥಾಪನೆ ಹಾಗೂ ನೋಡಲ್ ಅಧಿಕಾರಿಗಳ ನೇಮಕ:** ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಕಚೇರಿಗಳನ್ನು ಶೀಘ್ರ ಸ್ಥಾಪಿಸಿ, ನೋಡಲ್ ಅಧಿಕಾರಿಗಳನ್ನು ನೇಮಿಸುವುದಾಗಿ ಜಿಲ್ಲಾ ಅನುಷ್ಠಾನ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಸಭೆಯಲ್ಲಿ ತಿಳಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳೂ ಗ್ಯಾರಂಟಿ ಯೋಜನೆಗಳ ಸ್ಥಿತಿಗತಿ ಕುರಿತು ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಹಿತಿ ನೀಡುವಂತೆ ಸೂಚಿಸಿದರು.

**ಯುವನಿಧಿ ಯೋಜನೆಯಡಿ 3.85 ಕೋಟಿ ಹಣ ಪಾವತಿ:** ಯುವನಿಧಿ ಯೋಜನೆ ಜಾರಿಯಾದ 2024ರ ಜನವರಿಯಿಂದ ಆಗಸ್ಟ್ ತಿಂಗಳವರೆಗೆ ಜಿಲ್ಲೆಯ 3977 ಫಲಾನುಭವಿಗಳ ಖಾತೆಗೆ ಒಟ್ಟು ರೂ. 38535000/- ನಿರುದ್ಯೋಗಿ ಭತ್ಯೆ ಪಾವತಿಸಲಾಗಿದೆ ಎಂದು ಉದ್ಯೋಗ ವಿನಿಮಯ ಕಚೇರಿಯ ರವಿಕುಮಾರ್ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಪದವಿ ಪೂರ್ಣಗೊಳಿಸಿದ 1817 ಪುರುಷರು, 2110 ಮಹಿಳೆಯರು ಸೇರಿದಂತೆ ಒಟ್ಟು 3927 ಫಲಾನುಭವಿಗಳು ಹಾಗೂ ಡಿಪ್ಲೋಮಾ ಪೂರ್ಣಗೊಳಿಸಿದ 23 ಪುರುಷರು, 27 ಮಹಿಳೆಯರು ಸೇರಿದಂತೆ 50 ಫಲಾನುಭವಿಗಳು ಸೇರಿದಂತೆ ಒಟ್ಟು 3977 ಫಲಾನುಭವಿಗಳು ಇದ್ದಾರೆ. ಯುವನಿಧಿ ಯೋಜನೆಯ ಜಿಲ್ಲೆಯ ಫಲಾನುಭವಿಗಳು ಹೆಚ್ಚಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಧಾರವಾಡ, ಬೆಂಗಳೂರು, ಮೈಸೂರು, ಮಂಗಳೂರು ಜಿಲ್ಲೆಗಳಿಗೆ ತರಬೇತಿ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಯುವನಿಧಿ ಗ್ಯಾರಂಟಿ ಯೋಜನೆ ಮೂಲಕ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ ರೂ.3000 ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿದ ನಿರುದ್ಯೋಗಿಗಳಿಗೆ ಮಾಸಿಕ ರೂ.1500 ಸಿಗಲಿದ್ದು, ಈ ಯೋಜನೆಯಡಿ ನಿರುದ್ಯೋಗ ಭತ್ಯೆಯನ್ನು 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುತ್ತದೆ. ಪದವಿ ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿ 180 ದಿನಗಳ ಆದನಂತರ ಈ ಯೋಜನೆಗೆ ಅರ್ಜಿ ಸಲ್ಲಿಸಲು ಅರ್ಹರು. ಉನ್ನತ ಶಿಕ್ಷಣ ಹಾಗೂ ಉದ್ಯೋಗಕ್ಕೆ ಹೋದರೆ ಈ ಯೋಜನೆಗೆ ಅರ್ಹರಿರುವುದಿಲ್ಲ ಎಂದು ತಿಳಿಸಿದ ಅವರು, ಯುವನಿಧಿಗೆ ನೋಂದಾಯಿಸಿಕೊಂಡಿರುವ ಫಲಾನುಭವಿಗಳು ತಾವು ವ್ಯಾಸಂಗ ಮಾಡುತ್ತಿಲ್ಲ, ಸ್ವಯಂ ಉದ್ಯೋಗಿಯಲ್ಲ, ನಿರುದ್ಯೋಗಿ ಎಂದು ಪ್ರತಿ ತಿಂಗಳು 25ನೇ ತಾರೀಕುನೊಳಗೆ ಸ್ವಯಂ ಘೋಷಣೆ ಸಲ್ಲಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್ ಮಾತನಾಡಿ, ಯುವನಿಧಿ ಯೋಜನೆ ನೋಂದಣಿಗೆ ಸಂಬಂಧಪಟ್ಟಂತೆ ಪದವಿ ಹಾಗೂ ಡಿಪ್ಲೊಮಾ ಕಾಲೇಜುಗಳಿಗೆ ಭೇಟಿ ನೀಡಿ, ಪೋಸ್ಟರ್ ಮೂಲಕ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು.

**ಗೃಹಜ್ಯೋತಿಗೆ ಪ್ರತಿ ಮಾಹೆ 13 ಕೋಟಿ ಹೊಂದಾಣಿಕೆ ಮೊತ್ತ ಪಾವತಿ:** ಗೃಹ ಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಪ್ರತಿ ಮಾಹೆ 13 ಕೋಟಿ ಹೊಂದಾಣಿಕೆ ಮೊತ್ತ ಪಾವತಿ ಮಾಡಲಾಗುತ್ತಿದೆ. ಇಲ್ಲಿಯವರೆಗೂ 175.82 ಕೋಟಿ ಗೃಹಜ್ಯೋತಿ ಯೋಜನೆಯಡಿ ವೆಚ್ಚ ಭರಿಸಲಾಗಿದೆ ಎಂದು ಬೆಸ್ಕಾಂ ಇಂಜಿನಿಯರ್ ನಾಗರಾಜ್ ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 4,16,215 ವಿದ್ಯುತ್ ಬಳಕೆದಾರರು ಇದ್ದು, ಇದರಲ್ಲಿ 3,73,754 ಗೃಹಜ್ಯೋತಿ ಯೋಜನೆಯಡಿ ಫಲಾನುಭವಿಗಳಾಗಿದ್ದಾರೆ. ಎಂದು ತಿಳಿಸಿದರು. ವಿದ್ಯುತ್ ಬಳಕೆಗೆ ಸಂಬಂಧಪಟ್ಟಂತೆ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಅಧ್ಯಕ್ಷ ಶಿವಣ್ಣ ಸೂಚನೆ ನೀಡಿದರು.

**ಶಕ್ತಿ ಯೋಜನೆ: 2.93 ಕೋಟಿ ನಾರಿಯರು ಉಚಿತ ಪ್ರಯಾಣ:** ಶಕ್ತಿ ಯೋಜನೆಯಡಿ 2024ರ ಸೆಪ್ಟೆಂಬರ್ ಅಂತ್ಯಕ್ಕೆ ಜಿಲ್ಲೆಯಲ್ಲಿ 2,93,93,157 ನಾರಿಯರು ಉಚಿತ ಪ್ರಯಾಣಬೆಳೆಸಿದ್ದಾರೆ.ಶಕ್ತಿಯೋಜನೆಯಡಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಚಿತ್ರದುರ್ಗ ವಿಭಾಗಕ್ಕೆ ಮಹಿಳೆಯರಿಗೆ ನೀಡಿರುವ ಶೂನ್ಯ ದರದ ಟಿಕೆಟ್ ಮೂಲಕ 114.83 ಕೋಟಿ ರೂ. ಆದಾಯ ಲಭಿಸಿದೆ ಎಂದು ಕೆಎಸ್‌ಆರ್‌ಟಿಸಿಯ ಸಂಚಾರ ನಿಯಂತ್ರಕ ಡಿ.ಟಿ.ಸುರೇಶ್ ಹೇಳಿದರು.

ಶಕ್ತಿ ಯೋಜನೆಯಿಂದ ಮಹಿಳಾ ಸಬಲೀಕರಣ, ಆರ್ಥಿಕ ವಹಿವಾಟು ಹೆಚ್ಚಳಗೊಂಡಿದೆ ಎಂದು ಸಂತಸ ವ್ಯಕ್ತಪಡಿಸಿದ ಅಧ್ಯಕ್ಷ ಶಿವಣ್ಣ, ಅಗತ್ಯ ಇರುವ ಕಡೆ ಗ್ರಾಮೀಣ ಪ್ರದೇಶಗಳಲ್ಲಿ ಬಸ್ ಸಂಚಾರಕ್ಕೆ ಅಗತ್ಯ ಕ್ರಮವಹಿಸಬೇಕು. ಸಾರ್ವಜನಿಕರ ಬೇಡಿಕೆ ಹಿನ್ನಲೆಯಲ್ಲಿ ಹಿರಿಯೂರಿ ನಿಂದ ಹೊಸದುರ್ಗಕ್ಕೆ ರಾತ್ರಿ 6 ಗಂಟೆಯ ನಂತರ ಬಸ್ ಸೌಲಭ್ಯಕ್ಕೆ ಅಗತ್ಯ ಕ್ರಮ ವಹಿಸಬೇಕು ಎಂದು ಸಾರಿಗೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಅನ್ನಭಾಗ್ಯ ಯೋಜನೆಯಡಿ ರೂ.248.90 ಕೋಟಿ ಪಾವತಿ: ಅನ್ನಭಾಗ್ಯ ಯೋಜನೆಯಡಿ ಜಿಲ್ಲೆಯಲ್ಲಿ ಜೂನ್ ಮಾಹೆಯಲ್ಲಿ 3,65,783 ಫಲಾನುಭವಿಗಳಿಗೆ ಹಣ ಪಾವತಿಯಾಗಿದೆ. ಪ್ರತಿ ಮಾಹೆ ಜಿಲ್ಲೆಯಲ್ಲಿ ಸರಾಸರಿ ರೂ.20 ಕೋಟಿಕೂ ಅಧಿಕ ಮೊತ್ತವನ್ನು ಪಾವತಿ ಮಾಡಲಾಗುತ್ತಿದ್ದು, ಅನ್ನಭಾಗ್ಯ ಯೋಜನೆಯಡಿ ಇದುವರೆಗೂ 248.90 ಕೋಟಿ ರೂ. ಹಣ ಪಾವತಿ ಮಾಡಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್ ಹೇಳಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಡಿ.ಎನ್.ಮೈಲಾರಪ್ಪ, ನಾಗೇಶ್ ರೆಡ್ಡಿ, ನಿರಂಜನ್ ಸೇರಿದಂತೆ ಸದಸ್ಯರು ಹಾಗೂ ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್, ಬೆಸ್ಕಾಂ ಇಂಜಿನಿಯರ್ ನಾಗರಾಜ್, ಉದ್ಯೋಗ ವಿನಿಯಮ ಕಚೇರಿಯ ರವಿಕುಮಾರ್, ಶಿಕ್ಷಣ ಇಲಾಖೆಯ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸೇರಿದಂತೆ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಇದ್ದರು.

ಪ್ರಮುಖ ಸುದ್ದಿ

# ರಾಜ್ಯದಲ್ಲಿ ದಲಿತ ಸಿಎಂ ವಿಚಾರ ಈಗ ಅಪ್ರಸ್ತುತ: ಸಚಿವ

» **ಚಿತ್ರದುರ್ಗ**

ರಾಜ್ಯದಲ್ಲಿ ದಲಿತ ಸಿಎಂ ವಿಚಾರ ಈಗ ಅಪ್ರಸ್ತುತ ಮುಂದೆ ದಲಿತ ಸಿಎಂ, ಪಿಎಂ ಆಗಲಿ ಬೇಡ ಎನ್ನಲು ಆಗಲ್ಲ ಈಗ ಸದ್ಯಕ್ಕೆ ನಮ್ಮಲ್ಲಿ ಸಿಎಂ ಕುರ್ಚಿ ಖಾಲಿ ಇಲ್ಲ ದಲಿತ ನಾಯಕರು ಸಾಕಷ್ಟು ಮಂದಿ ಇದ್ದಾರೆ ಮುಂದಕ್ಕೆ ಅವ್ರು ಬೇಕಾದ್ರೆ ಸಿಎಂ ಆಗಲಿ ಮುಂದೆ ಅವ್ರು ದೇಶಕ್ಕೆ ಪ್ರಧಾನಿ, ರಾಷ್ಟ್ರಪತಿಯೂ ಆಗಬಹುದು ಮುಂದೆ ದಲಿತ ಸಮುದಾಯದವರು ಸಿಎಂ ಆಗುವ ಅವಕಾಶ ಇದೆ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗ ರೆಡ್ಡಿ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ದಲಿತ ಸಿಎಂ ಆಗುವ ವಿಚಾರವಾಗಿ ಅಭಿಪ್ರಾಯ ತಿಳಿಸಿ, ಹರಿಯಾಣದಲ್ಲಿ ಬಿಜೆಪಿ ಮುನ್ನಡೆ ವಿಚಾರ ಹರಿಯಾಣದಲ್ಲಿ ಬಿಜೆಪಿ ಬರಲ್ಲ ಅಂದುಕೊಂಡಿದ್ದೆವು 10 ವರ್ಷದಿಂದ ಆಡಳಿತದಲ್ಲಿ ಇದ್ದೆವು ಜನರಿಗೂ ಬೇಸರ ಆಗಿದೆ, ಮೋದಿ ಆಡಳಿತದ ಬಗ್ಗೆ ಬೇಸರ



ಇದೆ ಬಿಜೆಪಿ ಮುನ್ನಡೆ ಇದೆ, ಕಾಂಗ್ರೆಸ್ ಸ್ವಲ್ಪ ಹಿನ್ನಡೆ ಇದೆ ಕೆಲವರು ಬಾರಿ ಜನರಿಗೆ ಬಿಜೆಪಿಗರ ಮಾತು ಇಂಪಾಗಿ ಕೇಳಿಸುತ್ತೆ ಜನರು ಬಿಜೆಪಿಯ ಸುಳ್ಳನ್ನ ಬೇಗ ನಂಬುತ್ತಾರೆ ಸುಳ್ಳು ಹೇಳುವುದರಲ್ಲಿ ಬಿಜೆಪಿಯವರು ಎಕ್ಸ್‌ಪರ್ಟ್ ಈ ಬಾರಿಯೂ ಜನರಿಗೆ ಬಿಜೆಪಿ ಸುಳ್ಳು ಇಂಪಾಗಿ ಕೇಳಿಸಿದೆ ಜನ ನಂಬುವಂತೆ ಬಿಜೆಪಿಗರು ಸುಳ್ಳುಗಳನ್ನು ಹೇಳುತ್ತಾರೆ ಲೋಕಸಭೆ ಚುನಾವಣೆಯಲ್ಲಿ ಇಲ್ಲೂ ನಂಬಿದ್ದರಲ್ಲ ಎಂದು ವ್ಯಂಗವಾಡಿದರು.

5 ವರ್ಷ ಇರ್ತಾರೆ ಅಂತ ಸತೀಶ್ ಜಾರಕಿಹೊಳಿ ಹೇಳಿದ್ದಾರೆ 5 ವರ್ಷ ಸಿಎಂ ಸಿದ್ದರಾಮಯ್ಯ ಇರ್ತಾರೆ ಅಂತ ನಾನು ಹೇಳ್ತೀನಿ ವಿಜಯೇಂದ್ರಗೆ ಮಲಗಿದ್ದಾಗ ಕನಸು ಬೀಳುತ್ತೆ ಅದನ್ನೇ ನಿಜ ಅಂದುಕೊಂಡು ಎಲ್ರಿಗೂ ಹೇಳ್ತಾರೆ ಮುಡಾ ಕೇಸ್ ಅದರ ಪಾಡಿಗೆ ಅದು ನಡೆಯುತ್ತೆ ಬಿಜೆಪಿ, ಜೆಡಿಎಸ್ ನೂರಾರು ಹಗರಣ ಇದೆಯಲ್ಲ ಅದರ ಬಗ್ಗೆ ನಾವು ಮೊದಲು ಮಾತಾಡೋಣ ಸತೀಶ್ ಜಾರಕಿಹೊಳಿ, ಪರಮೇಶ್ವರ್ ಭೇಟಿ ವಿಚಾರ ಅವರಿಬ್ಬರದ್ದು ವೈಯಕ್ತಿಕ ಸಭೆ ನಡೆಸಿಲ್ಲ ರಾಜ್ಯಕ್ಕೆ ಸಂಬಂಧ ಪಟ್ಟಂಗೆ, ಪಕ್ಷದ ಬಗ್ಗೆ ಚರ್ಚೆ ಮಾಡಿರಬಹುದು ಎಂದು ರಾಮಲಿಂಗಾರೆಡ್ಡಿ ಉತ್ತರಿಸಿದರು. ಜಾತಿ ಜನಗಣತಿ ಬಗ್ಗೆ ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಮಾಡಲಾಗುವುದು. ಜಾತಿಗಣತಿ ವಿಚಾರ ಬಹಳ ದಿನದಿಂದ ಇತ್ತು ಯಾವತ್ತಿದ್ರು ಒಂದು ದಿನ ಬರಬೇಕಿತ್ತಲ್ಲ ಆಮೇಲೆ ಇದೆಲ್ಲ ಜಾತಿ ಗಣತಿಯನ್ನ ಯಾರು ಸಹ ಓದಿಲ್ಲ ವರದಿ ಬಂದ ಮೇಲೆ ಏನಿದೆ ಅಂತ ಗೊತ್ತಾಗುತ್ತೆ ಒಳ್ಳೇದು ಇದ್ರೆ ಸರಿ ಎಂದರು.

ತಪ್ಪಿದ್ರೆ ಸರಿ ಮಾಡಿಕೊಳ್ಳಿ ಅಂತ ಸಲಹೆ ನೀಡಬಹುದು ಎಲ್ರೂ ಜಾತಿ ಗಣತಿ ಬಗ್ಗೆ ತಪ್ಪಿದ್ರೆ ಸಲಹೆ ಕೊಡಲಿ ತಪ್ಪಿದ್ರೆ ಸರಿ ಮಾಡಿಕೊಳ್ಳಬಹುದು ಅಲ್ವಾ ಜಾತಿ ಗಣತಿ ಜಾರಿ ಆದ್ಮೇಲೆ ಸರಿ ಇದೆಯೋ, ತಪ್ಪಿದ್ಯ ಗೊತ್ತಾಗುತ್ತೆ ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲಿ ಡಿಸಿಸಿ ಅಧ್ಯಕ್ಷ ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿ, ಕೆ. ಪಿ. ಸಂಪತ್ ಕುಮಾರ್, ದ್ರಾಕ್ಷ ಮಂಡಳಿ ಅಧ್ಯಕ್ಷ ಯೋಗಿಶ್ ಬಾಬು. ಮೈಲಾರಪ್ಪ ಇತರರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್



ಚಿತ್ರದುರ್ಗ ಕೆಳಗೋಟೆಯಲ್ಲಿರುವ ಅಂಬಾಭವಾನಿ ದೇವಸ್ಥಾನದಲ್ಲಿ ಮರಾಠ ವಿದ್ಯಾವರ್ಧಕ ಸಂಘದಿಂದ ದಸರಾ ನವರಾತ್ರಿಯ ಪ್ರಯುಕ್ತ ಅಂಬಾಭವಾನಿಗೆ ಬಗೆ ಬಗೆಯ ಹೂವು ಹಾರಗಳಿಂದ ವಿಶೇಷವಾಗಿ ಅಲಂಕರಿಸಲಾಯಿತು. ನೂರಾರು ಭಕ್ತರು ಧಾವಿಸಿ ಶ್ರದ್ಧಾಭಕ್ತಿಯಿಂದ ಪೂಜೆ ಸಲ್ಲಿಸಿದರು.

### ಅಕ್ಟೋಬರ್ 14 ರಂದು ಸಾಮಾನ್ಯ ಸಭೆ

» ದಾವಣಗೆರೆ

ಮಹಾನಗರಪಾಲಿಕೆಯ ಮಹಾಪೌರರಾದ ಚಮನ್ ಸಾಬ್.ಕೆ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 14 ರಂದು ಮಧ್ಯಾಹ್ನ 3 ಗಂಟೆಗೆ ಸಾಮಾನ್ಯ ಸಭೆಯನ್ನು ಪಾಲಿಕೆಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿ ಸಭೆ

» ದಾವಣಗೆರೆ

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಸಭೆಯು ಅಕ್ಟೋಬರ್ 18 ರಂದು ಮಧ್ಯಾಹ್ನ 3 ಗಂಟೆಗೆ ಪಿ.ಎಂ.ನರೇಂದ್ರಸ್ವಾಮಿ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ. ಸಭೆಯಲ್ಲಿ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಬರುವ ಎಸ್‌ಸಿಪಿ, ಟಿಎಸ್‌ಪಿಯಡಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು, ಸವಲತ್ತುಗಳ ಕುರಿತಂತೆ ಪರಿಶೀಲನೆ ನಡೆಸುವರು.

### ಬೆಸ್ಕಾಂನಿಂದ ಉಚಿತ ಡಿಜಿಟಲ್ ಮೀಟರ್ ಅಳವಡಿಕೆ

» ದಾವಣಗೆರೆ

ಜಗಳೂರು ಬೆಸ್ಕಾಂ ಉಪವಿಭಾಗದ ವ್ಯಾಪ್ತಿಯಲ್ಲಿ ಹಳೇ ವಿದ್ಯುತ್ ಮೀಟರ್‌ಗಳನ್ನು ತೆಗೆದು ಉಚಿತವಾಗಿ ಹೊಸ ಡಿಜಿಟಲ್ ಮೀಟರ್‌ಗಳನ್ನು ಅಳವಡಿಸಲಾಗುತ್ತಿದ್ದು ಬೆಸ್ಕಾಂ ಗ್ರಾಹಕರ ಬಳಿ ಹಳೆ ಮಾಪಕ ಎಲೆಕ್ಟ್ರೋ ಮೆಕ್ಯಾನಿಲ್ ಬದಲಾಗಿ ಎಲೆಕ್ಟ್ರೋ ಸ್ಟ್ಯಾಟಿಕ್ ಡಿಜಿಟಲ್ ಮಾಪಕ ಅಳವಡಿಸಿಕೊಳ್ಳಲು ಬೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

### ಚನ್ನಗಿರಿ: ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯ ನೇಮಕಾತಿ ಅಧಿಸೂಚನೆ ರದ್ದು

» ದಾವಣಗೆರೆ

ಚನ್ನಗಿರಿ ತಾಲ್ಲೂಕಿನಲ್ಲಿ ಖಾಲಿ ಇದ್ದ 16 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 52 ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು ಇದನ್ನು ರದ್ದುಪಡಿಸಲಾಗಿದೆ. ಮುಂದೆ ನಡೆಯುವ ನೇಮಕಾತಿ ಬಗ್ಗೆ ದಿನಾಂಕವನ್ನು ತಿಳಿಸಲಾಗುತ್ತದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ರಾಜಾನಾಯ್ಕ್ ತಿಳಿಸಿದ್ದಾರೆ.

### ಹೊಲಿಗೆ, ವೀಡಿಯೋಗ್ರಾಫಿ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಯುವಕ, ಯುವತಿಯರಿಗೆ ಹೊಲಿಗೆ ಹಾಗೂ ವಿಡಿಯೋಗ್ರಾಫಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಹೊಲಿಗೆ ತರಬೇತಿಗೆ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿ 18 ರಿಂದ 40 ವರ್ಷದೊಳಗಿರಬೇಕು. ವಿಡಿಯೋಗ್ರಾಫಿ ತರಬೇತಿಗೆ ಎಸ್.ಎಸ್.ಎಲ್.ಸಿ ಉತ್ತೀರ್ಣ, ಅನುತ್ತೀರ್ಣರಾಗಿದ್ದು 18 ರಿಂದ 40 ವರ್ಷ ವಯೋಮಾನದವರಾಗಿರಬೇಕು. ಅರ್ಜಿಯನ್ನು ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 25 ರೊಳಗೆ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗೆ 08192-237480 ದೂರವಾಣಿಗೆ ಸಂಪರ್ಕಿಸಲು ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

# ದಸರಾ: ದುರ್ಗದಲ್ಲೊಂದು ಬೊಂಬೆಗಳ ಮನೆ

» ಚಿತ್ರದುರ್ಗ





ನವರಾತ್ರಿ ದಸರಾ ಪ್ರಯುಕ್ತ ಬೊಂಬೆಗಳನ್ನು ಕೂರಿಸುವ ಸಂಪ್ರದಾಯ ವಿಶೇಷವಾಗಿದೆ. ಮನೆಗಳಲ್ಲಿ ಶಾಸ್ತ್ರಕ್ಕೆ ಕೆಲವು ಬೊಂಬೆಗಳನ್ನು ಕೂರಿಸಿ ಪೂಜಿಸುವವರು ಹಲವರಾದರೆ, ಪ್ರತಿವರ್ಷವೂ ತಮ್ಮ ಮನೆಯನ್ನೇ ಬೊಂಬೆಗಳ ಆಲಯವನ್ನಾಗಿಸಿ ಕೂರಿಸಿ ಪೂಜಿಸುವವರು ಕೆಲವೇ ಕೆಲವರು.

ವಿಶೇಷವಾಗಿ ಮೈಸೂರು ಅರಮನೆ ಹಾಗೂ ದೊಡ್ಡ ಮಹಾನಗರಗಳಲ್ಲಿ ಹಾಗೂ ಕೆಲವು ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಕೆಲವು ಉದಾಹರಣೆಗಳಿದ್ದು, ಚಿತ್ರದುರ್ಗದಲ್ಲಿಯೂ ಇಂತಹ ಒಂದು ಅಪೂರ್ವ ಉದಾಹರಣೆ ನಮ್ಮೆದುರಿಗೆ ಇದೆ.ಚಿತ್ರದುರ್ಗ ನಗರದ ವಿಪಿ ಬಡಾವಣೆಯಲ್ಲಿರುವ ಪೋಸ್ಟ್ ಭೀಮರಾವ್ ಮನೆ ಕಾಂಪೌಂಡ್,ಮಾರುತಿ ಗ್ಯಾಸ್ ಏಜನ್ಸಿ ಎದುರಿನ ಶ್ರೀಮತಿಎಂ.ಬಿ. ಲಕ್ಷ್ಮೀ ಅವರ ಮನೆಯಲ್ಲಿ ಪ್ರತಿ ವರ್ಷವೂ ದಸರಾ ಹಬ್ಬದ ಪ್ರಯುಕ್ತ 10 ದಿನಗಳ ಕಾಲ ಗೊಂಬೆಗಳನ್ನು ಕೂಡಿಸುತ್ತಿದ್ದಾರೆ.

ಇವರು ಕಳೆದ 30 ವರ್ಷಗಳಿಂದ ಈ ಕಾರ್ಯವನ್ನು ಮಾಡುತ್ತಾ ಇದ್ದಾರೆ. ಇದರಲ್ಲಿ ವಿಧವಿಧವಾದ ಗೊಂಬೆಗಳನ್ನು ನೋಡುವುದೇ ಚಂದ. ವರ್ಷದಿಂದ ವರ್ಷಕ್ಕೆ ಗೊಂಬೆಗಳು ಹೆಚ್ಚಾಗುತ್ತಿವೆ. ಇದನ್ನ ನೋಡಿದರೆ ಮೈಸೂರಿನಲ್ಲಿರುವ ಗೊಂಬೆ ಮನೆ ನೋಡಿದ ಹಾಗೆ ಅನುಭವವಾಗುತ್ತದೆ. ಪ್ರತಿದಿನ ಸಂಜೆ ಭಜನಾ ಕಾರ್ಯಕ್ರಮಗಳು ಇರುತ್ತದೆ. ಹಾಗೂ ವಿಧವಿಧವಾದ ಪ್ರಸಾದಗಳನ್ನು ದೇವರಿಗೆ ನೈವೇದ್ಯವನ್ನು ಮಾಡಿ ಬೊಂಬೆಗಳನ್ನು ನೋಡಲು ಬರುವ ಸಾರ್ವಜನಿಕರಿಗೆ ವಿತರಿಸುತ್ತಾರೆ. ಎಲ್ಲರೂ ಈ ದಸರಾ ಹಬ್ಬದ ಸಂದರ್ಭದಲ್ಲಿ ವಿ.ಪಿ. ಬಡಾವಣೆಯಲ್ಲಿರುವ ಈ ಗೊಂಬೆ ಮನೆಗೆ ಭೇಟಿ ಕೊಟ್ಟು ಬೊಂಬೆಗಳ ಲೋಕವನ್ನೇ ನೋಡಬಹುದು. ಗೊಂಬೆಗಳಲ್ಲಿ ದಶಾವತಾರ ಸೇರಿದಂತೆ ವಿವಿಧ ದೇವಿ – ದೇವರ ಬೊಂಬೆಗಳು, ಗುರುಗಳು ದಾರ್ಶನಿಕರ ಬೊಂಬೆಗಳು, ಕ್ರಿಕೆಟ್ ಮೈದಾನ ಆಟಗಾರರ ಪ್ರತಿಕೃತಿ, ಅಡಿಗೆ ಮನೆಯ ಸಾಮಾನುಗಳ ಆಕರ್ಷಣೀಯ ಕಿರು ಪ್ರತಿಕೃತಿಗಳು, ಮೋಟಾರ್ ವಾಹನ ಕಾರುಗಳ ಕಿರು ಮಾದರಿ ಬೊಂಬೆಗಳು ಒಳಗೊಂಡಂತೆ ಮುದ್ದಾದ ಬೊಂಬೆಗಳ ಪುಟ್ಟ ಲೋಕವೇ ಈ ಬೊಂಬೆ ಮನೆಗೆ ಬರುವವರ ಕಣ್ಣೆದುರಿಗೆ ಅನಾವರಣಗೊಳ್ಳುತ್ತದೆ. ಅದರಲ್ಲಿಯೂ ಮಕ್ಕಳಿಗಂತೂ ಇದು ಬಹಳ ಆಕರ್ಷಣೀಯ ಅನುಭವವನ್ನೇ ನೀಡುತ್ತದೆ. ಮಕ್ಕಳು ಬೊಂಬೆಗಳನ್ನು ನೋಡಿ ಆನಂದಿಸಿ, ಪ್ರಸಾದ ಸ್ವೀಕರಿಸಲು ಎಲ್ಲರಿಗೂ ಮುಕ್ತ ಅವಕಾಶವಿದೆ.

# 13 ರಂದು ಮದಕರಿ ನಾಯಕ ಜಯಂತಿ

» ಚಿತ್ರದುರ್ಗ



ಜಿಲ್ಲಾ ವಕೀಲರ ಸಂಘ ಚಿತ್ರದುರ್ಗ ಹಾಗೂ ಜಿಲ್ಲಾ ವಕೀಲರ ಸಾಂಸ್ಕೃತಿಕ ಬಳಗ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 13 ರಂದು ನ್ಯಾಯಾಲಯದ ಆವರಣದಲ್ಲಿ ಮದಕರಿ ನಾಯಕ ಜಯಂತಿ ಹಾಗೂ ದಸರಾ ಹಬ್ಬದ ಅಂಗವಾಗಿ ರಾಜವೀರ ಮದಕರಿ ನಾಯಕ ಎಂಬ ಐತಿಹಾಸಿಕ ನಾಟಕವನ್ನು ಪ್ರದರ್ಶನ ಮಾಡಲಾಗುತ್ತದೆ ಇದರ ಮೂಲಕ ನ್ಯಾಯಾವಾದಿಗಳಲ್ಲಿ ಅಡಗಿರುವ ಸಪ್ತವಾದ ಪ್ರತಿಭೆಯನ್ನು ಹೊರ ಹಾಕುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದು ವಕೀಲರ ಸಂಘದ ಮಾಜಿ ಅಧ್ಯಕ್ಷ ಶಿವುಯಾದವ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು ಸಂಗೀತ ಶಿಕ್ಷಕರಾಗಿ ಜಿ.ಮೂಗಬಸಪ್ಪ, ನಾಟಕ ತರಬೇತುದಾರರಾಗಿ, ಎಂ.ಎಚ್ ಮರಿಸ್ವಾಮಿ ಅವರ ನೇತೃತ್ವದಲ್ಲಿ ಆ13 ರಂದು ಸಂಜೆ 8 ಗಂಟೆಗೆ ತುಮಕೂರಿನ ಶ್ರೀ ಲತಾ ಹೈಡ್ರಾಲಿಕ್ ಆಟೋಮೇಟಕ್ ಎಲ್.ಇ.ಡಿ.ಡ್ರಾಮ ಸೀನರಿಯಲ್ಲಿ ಡಿ.ಟಿ.ಎಸ್ ಧ್ವನಿವರ್ಧಕ ಯಂತ್ರಗಳಿಂದ ವಿದ್ಯುತ್ ದೀಪಗಳಿಂದ ಅಲಂಕೃತವಾದ ಭವ್ಯ ರಂಗ ಸಜ್ಜಿಕೆಯಲ್ಲಿ ವಕೀಲರು ರೋಚಕ ಇತಿಹಾಸದ ನಾಟಕವನ್ನು ಪ್ರಪ್ರಥಮ ಬಾರಿಗೆ ಚಿತ್ರದುರ್ಗದ ವಕೀಲರು ರಂಗಭೂಮಿಯಲ್ಲೂ ಖಡಕ್ ಪ್ರದರ್ಶನ ನೀಡಲು ತಯಾರಾಗಿದ್ದಾರೆ ಎಂದರು. ಜಿಲ್ಲೆಯ ಜನರಿಗೆ ಮತ್ತು ತಮ್ಮ ಕುಟುಂಬಸ್ಥರು ಮತ್ತು ಸಮಸ್ತ ಸಾರ್ವಜನಿಕರಿಗೆ ಮನರಂಜನೆ ನೀಡಲು ಮತ್ತು ವಕೀಲರು ತಾವೂ ಕಲಾವಿದರು ಎಂದು ತಮ್ಮ ಪ್ರತಿಭೆ ಅನಾವರಣ ಮಾಡಲು ತಯಾರಿದ್ದಾರೆ. ಹೀಗಾಗಿ ನ್ಯಾಯಾಲಯ ಇದೀಗ ಕಲಾ ರಂಗಭೂಮಿಯಾಗಿ ಸಿದ್ದವಾಗಿದೆ. ನ್ಯಾಯವಾದಿಗಳ ರಾಜವೀರ ಮದಕರಿನಾಯಕ ನಾಟಕ ತೀವ್ರ ಕುತೂಹಲ ಕೆರಳಿಸಿದೆ ಎಂದ ಅವರು ಹೈಕೋರ್ಟ್ ನ್ಯಾಯಮೂರ್ತಿಗಳಾದ ಖಿ ವೆಂಕಟೇಶ ನಾಯ್ಕ್ ನಾಟಕವನ್ನು ಉದ್ಘಾಟಿಸಲಿದ್ದಾರೆ. ಜಿಲ್ಲಾ ನ್ಯಾಯಾದೀಶರಾಧ ರೋಣ್ ವಾಸುದೇವ್, ಒಂದನೇ ಹೆಚ್ಚುವರಿ ಜಿಲ್ಲಾ ನ್ಯಾಯಾದೀಶರಾದ ನಿಂಬಣ್ಣಕಲ್ಕಣಿ ಎರಡನೇ ಹೆಚ್ಚುವರಿ ಜಿಲ್ಲಾ ನ್ಯಾಯಾದೀಶರಾದ ಗಂಗಾಧರ ಹಡಪದ್ ಸೇರಿದಂತೆ ಜಿಲ್ಲೆಯ ವಿವಿಧ ನ್ಯಾಯಾಲಯಗಳ ನ್ಯಾಯಾಧೀಶರು ನ್ಯಾಯಾವಾದಿಗಳು ಸಾರ್ವಜನಿಕರು ಹಿತೈಷಿಗಳು ಅಭಿಮಾನಿಗಳು ಭಾಗವಹಿಸಲಿದ್ದಾರೆ.

## ಯುವಕರನ್ನ ಜಾಗೃತಿಗೊಳಿಸಲು ಪಣತೊಟ್ಟ ಪದವೀಧರ

» ಚಿತ್ರದುರ್ಗ




ಸ್ವಚ್ಛ ವಿಧಾನ ಸಭೆ ಅಭಿಯಾನಕ್ಕಾಗಿ ಯುವಕನೊಬ್ಬ ಬಾಗಲಕೋಟೆಯಿಂದ ಬೆಂಗಳೂರು ಪಾದಯಾತ್ರೆ ನಡೆಸುತ್ತಿದ್ದಾರೆ.ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಸಮೀಪದ ರಾಷ್ಟ್ರೀಯ ಹೆದ್ದಾರಿ-4ರಸ್ತೆಯ ಮೂಲಕ ಬೆಂಗಳೂರಿಗೆ ಹೊರಟ್ಟಿದ್ದಾರೆ.ಬಾಗಲಕೋಟೆಯ ಎಂಎಸ್ಸಿ,ಎಂಟೆಕ್ ಓದಿಕೊಂಡಿರುವ ನಾಗರಾಜ ಕಲಕುಟಗರ ಎಂಬ ಯುವಕಪಾದಯಾತ್ರೆಆರಂಬಿಸಿದ್ದು ಕೈನಲ್ಲಿ ನನ್ನ ಮತ ಮಾರಾಟಕ್ಕಿಲ್ಲ, ಸ್ವಾತಂತ್ರ್ಯ ಸಮಾನತೆ ಪ್ರಜಾಪ್ರಭುತ್ವ ಉಳಿವಿಗಾಗಿ ಭ್ರಷ್ಟರಲ್ಲದ, ಕೋಮುವಾದಿಗಳಲ್ಲದ, ಪ್ರಬುದ್ಧ ಜನಪರ ಸುಸಂಸ್ಕೃತ ವ್ಯಕ್ತಿತ್ವವುಳ್ಳವರು ಬೇಕಾಗಿದ್ದಾರೆ ಎಂಬ ಶೀರ್ಷಿಕೆ ಅಡಿಯಲ್ಲಿ ಪಾದಯಾತ್ರೆ ಆರಂಬಿಸಿದ್ದಾರೆ.ಈ ಅಭಿಯಾನವನ್ನ ಮಿತಿ ಮೀರುತ್ತಿರುವ ಅನ್ಯಾಯ ಭ್ರಷ್ಟಾಚಾರ ಹೆಚ್ಚಾಗುತ್ತಿದ್ದು ಇದನ್ನ ತಡೆಯುವಲ್ಲಿ ಸರ್ಕಾರಗಳು ವಿಫಲವಾಗಿವೆ ಕೇಳಲು ಹೋದಲ್ಲಿ ದೌರ್ಜನ್ಯ ಮಾಡಿ ಸುಳ್ಳು ಕೇಸುಗಳನ್ನ ದಾಖಲಿಸುತ್ತಿದ್ದಾರೆ. ನಾವು ಆಯ್ಕೆ ಮಾಡಿದ ಸರ್ಕಾರಗಳೇ ದಬ್ಬಾಳಿಕೆ ಮಾಡುತ್ತಿವೆ.ವಿದ್ಯಾವಂತರು ಮುಂದೆ ಬಂದು ಪ್ರಾಮಾಣಿಕತೆಯಿಂದ ಮತ ಚಲಾಯಿಸಿ ಹೆಂಡ, ಹಣ, ಸೀರೆ ಪಂಚೆ ಇತಂಹ ಆಮಿಷಕ್ಕೆ ಒಳಗಾಗದೆ ಮತಹಾಕಿ. ಭ್ರಷ್ಟ ಕೋಮುವಾದಿಗಳನ್ನ ದೂರವಿಟ್ಟು ಪ್ರಬುದ್ಧರನ್ನ ಆಯ್ಕೆ ಮಾಡಿ ಒಳ್ಳೆಯ ಬದಲಾವಣೆ ತರಬೇಕಿದೆ. ಈ ನಿಟ್ಟಿನಲ್ಲಿ ಯುವಕರಲ್ಲಿ ಜಾಗೃತಿ ಮೂಡಿಸಲು ಈ ಅಭಿಯಾನ, ಪಾದಯಾತ್ರೆ ಮೂಲಕ ಬೆಂಗಳೂರು ತಲುಪಿ ಚುನಾವಣಾ ಆಯೋಗ ಹಾಗೂ ಸರ್ಕಾರಕ್ಕೂ ಮನವಿ ಸಲ್ಲಿಸುವೆ.ಸುವುದಾಗಿ ನಾಗರಾಜ ಕಲಕುಟಗರ ಅವರು ತಿಳಿಸಿದ್ದಾರೆ.



ಚಿತ್ರದುರ್ಗ ತಾಲ್ಲೂಕು ಮಟ್ಟದ ಒಕ್ಕೂಟದ ಪದಾಧಿಕಾರಿಗಳ ಸಮಾವೇಶದಲ್ಲಿ ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಸಾಮಾನ್ಯ ಸೇವಾ ಕೇಂದ್ರ ಉದ್ಘಾಟಿಸಿದರು.

# ಜನತೆ ಕಲ್ಯಾಣಕ್ಕಾಗಿ ಶಾರದಾಶ್ರಮದಲ್ಲಿ ದುರ್ಗಾಹೋಮ

» ಚಳ್ಳಕೆರೆ



ನಗರದ ಶಾರದಾಶ್ರಮದಲ್ಲಿ ಜನತೆಯ ಅಭ್ಯುದಯಕ್ಕಾಗಿ ಉತ್ತಮ ಮಳೆ, ಬೆಳೆ, ಸುಖ, ಶಾಂತಿ, ನೆಮ್ಮದಿಗಾಗಿ ಪ್ರಾರ್ಥಿಸಿ ಆಶ್ರಮದ ಮಾತಾಜಿತ್ಯಾಗಮಯಿಯವರ ನೇತೃತ್ವದಲ್ಲಿ ಶ್ರೀದುರ್ಗಾಹೋಮ, ಮಹಾಗಣಪತಿ, ನವಗ್ರಹ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮಾತಾಜಿತ್ಯಾಗಮಯಿ, ವಿಶ್ವದಲ್ಲೇ ಧರ್ಮಕ್ಕಾಗಿ ನಿರಂತರ ಪೂಜಾ, ಹೋಮ ಕಾರ್ಯಗಳು ನಡೆಯುವ ಪುಣ್ಯನೆಲವೆಂದರೆ ಅದು ಭಾರತಮಾತ್ರ.ಭಾರತೀಯರಲ್ಲಿ ವಿಶೇಷವಾದ ಭಕ್ತಿ, ಭಾವನೆಗಳನ್ನು ನಾವು ಕಾಣಬಹುದು. ಯಾವುದೇ ಸಂದರ್ಭದಲ್ಲಾಗಲಿ ನಾವು ಭಗವಂತನನ್ನು ಸ್ಮರಿಸಿ ಇಂತಹ ಪುಣ್ಯ ಕಾರ್ಯಗಳನ್ನು ನೆರವೇರಿಸಿದಾಗ ಅದರ ಪ್ರತಿಫಲ ಎಲ್ಲರಿಗೂ ಸಿಗುತ್ತದೆ ಎಂಬ ಭಾವನೆ ನಮ್ಮದು. ಆಶ್ರಮದ ಹಲವಾರು ಭಕ್ತರು ಸ್ವಯಂ ಪ್ರೇರಣೆಯಿಂದ ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮುಂದಿನ ದಿನಗಳಲ್ಲೂ ಪೂಜಾ ಕಾರ್ಯಕ್ರಮಗಳು ಮುಂದುವರೆಯುಲಿವೆ ಎಂದರು.

ಇದೇ ಸಂದರ್ಭದಲ್ಲಿ ಹೋಮ, ಪೂಜಾ ಕಾರ್ಯಕ್ರಮಗಳನ್ನು ಭಕ್ತಿ, ಶ್ರದ್ದೆಯಿಂದ ನಡೆಸಿ, ಆಗಮಿಸಿದ್ದ ಎಲ್ಲಾ ಭಕ್ತರಿಗೂ ಪ್ರೇರಣೆ ಉಂಟಾಗುವಂತೆ ಪೂಜಾ ಕಾರ್ಯಕ್ರಮ ನಡೆಸಿಕೊಟ್ಟ ನಾಗಶಯನಗೌತಮ್‌ರವರ ಧಾರ್ಮಿಕ ಕಾರ್ಯಕ್ರಮಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.

ಮಠದ ಸದ್ಭಕ್ತರಾದ ವೆಂಕಟೇಶರೆಡ್ಡಿ, ಗೀತಾ, ನಾಗರಾಜು, ಯಶೋಧ, ಪ್ರಕಾಶ್, ಅಂಬುಜಾ, ಕವಿತಾ, ಕೆ.ಎಸ್.ವೀಣಾ, ಗಂಗಾಭಿಕೆ, ಮದ್ದಿಹಳ್ಳಿನಾಗರಾಜು, ಜಗದಾಂಭ, ಕೆಂಚಮ್ಮ, ಮಹಾದೇವಿ, ದೊಡ್ಡಅಜ್ಜಯ್ಯ, ಡಾ.ಭೂಮಿಕ, ಸಂತೋಷ್, ಚೇತನ್, ರೂಪ, ಎಂ.ಯತೀಶ್ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ತಿರುಪತಿ ಪಾಟೀಲ್ ಹೇಳಿಕೆ

# ಜಯಂತಿ ಸಭೆಗೆ ಗೈರಾದ ಅಧಿಕಾರಿಗಳ ಮೇಲೆ ಶಿಸ್ತುಕ್ರಮ

» ಹೊಸದುರ್ಗ



ಮಹಾತ್ಮರ ಜಯಂತಿಗಳು ನಮಗೆಲ್ಲಾ ಆದರ್ಶ ಜೀವನದ ಸಂದೇಶವನ್ನು ತಿಳಿಸುತ್ತವೆ. ಅವರ ಜೀವನ ಮತ್ತು ಸಾಧನೆಗಳನ್ನು ತಿಳಿದುಕೊಳ್ಳುವ ಕಾರ್ಯಕ್ರಮಗಳು. ಇಂತಹ ಜಯಂತಿಗಳನ್ನು ಅರ್ಥಪೂರ್ಣವಾಗಿ ಸರ್ಕಾರದಿಂದಲೇ ಆಚರಿಸಲಾಗುತ್ತದೆ. ಜವಾಬ್ದಾರಿ ಸ್ಥಾನದಲ್ಲಿರುವ ಅಧಿಕಾರಿಗಳೇ ಮಹಾತ್ಮರ ಜಯಂತಿಗಳ ಪೂರ್ವಭಾವಿ ಸಭೆಗೆ ಗೈರಾದರೆ ಹೇಗೆ? ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಬೇಕೆಂದು ಪೂರ್ವಭಾವಿ ಸಭೆ ಕರೆಯಲಾಗಿದೆ. ಆದರೆ, ಕೆಲವು ಇಲಾಖೆ ಅಧಿಕಾರಿಗಳು ಸಭೆಗೆ ಗೈರಾಗಿದ್ದಾರೆ. ಕೂಡಲೇ ಅವರಿಗೆ ನೋಟಿಸ್ ನೀಡಿ, ಅವರ ಮೇಲೆ ಶಿಸ್ತು ಕ್ರಮಕ್ಕೆ ಮುಂದಾಗಲಾಗುವುದು ಎಂದು ತಹಸೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು. ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದೇ ಅಕ್ಟೋಬರ್ 17ರಂದು ಜಯಂತಿ ಇದ್ದು, ಅಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ವೀರಭದ್ರೇಶ್ವರ ಸ್ವಾಮಿ ದೇವಾಲಯದ ಮುಂಭಾಗದಿಂದ ಕಲಾತಂಡಗಳೊಂದಿಗೆ ವಾಲ್ಮೀಕಿಯವರ ಭಾವಚಿತ್ರವನ್ನು ಮೆರವಣಿಗೆಯ ಮೂಲಕ ಅಶೋಕ ರಂಗಮಂದಿರಕ್ಕೆ ಕರೆತರಲಾಗುವುದು. ನಂತರ ವೇದಿಕೆ ಕಾರ್ಯಕ್ರಮ ನಡೆಯುವುದು. ಈ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕಶಾಸಕಬಿ.ಜಿ.ಗೋವಿಂದಪ್ಪನವರು ಉದ್ಘಾಟಿಸುವರು. ಪುರಸಭಾ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಎಲ್ಲಾ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಭಾಗವಹಿಸುವರು. ಕಳೆದ ಬಾರಿ ಜವಾಬ್ದಾರಿ ತೆಗೆದುಕೊಂಡಂತೆ,ಆಯಾಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಜವಾಬ್ದಾರಿ ತೆಗೆದುಕೊಂಡು ಜಯಂತಿಯನ್ನು ಯಶಸ್ವಿಗೊಳಿಸಲು ಸಹಕರಿಸಿ ಎಂದರು. ಜಯಂತಿಯ ವೇದಿಕೆಯ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ 10 ಜನ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಗುವುದು. ಜಯಂತಿಗೆ ಬಂದಂತವರಿಗೆ ತಿಂಡಿ ಮತ್ತು ನೀರಿನ ವ್ಯವಸ್ಥೆ ಮಾಡಲಾಗುವುದು. ವಾಲ್ಮೀಕಿ ನಾಯಕ ಜನಾಂಗ ಮತ್ತು ಇನ್ನಿತರ ಎಲ್ಲಾ ಜನಾಂಗದ ಬಂಧುಗಳು ಜಯಂತಿಯಲ್ಲಿ ಭಾಗವಹಿಸಿ, ಯಶಸ್ವಿಗೊಳಿಸಿ ಎಂದು ಮನವಿ ಮಾಡಿದರು. ಈ ವೇಳೆ ಸಭೆಯಲ್ಲಿ ವಿವಿಧ ಇಲಾಖೆ ಅಧಿಕಾರಿಗಳು, ವಾಲ್ಮೀಕಿ ನಾಯಕ ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಮುಖಂಡರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ದಲಿತ ಸಂಘರ್ಷ ಸಮಿತಿ ಸುವರ್ಣಮಹೋತ್ಸವ ಸಂಭ್ರಮ



» **ಚಳ್ಳಕೆರೆ**

ದಲಿತ ಸಂಘಟನೆಗಳ ಸುಧೀರ್ಘಕಾಲದ ಹೋರಾಟಗಳ ಮೂಲಕ ರಾಜ್ಯದ ದಲಿತ ಸಮುದಾಯಕ್ಕೆ ಹೊಸ ಆತ್ಮವಿಶ್ವಾಸವನ್ನು ಹುಟ್ಟುಹಾಕುತ್ತಿರುವ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪರಿವರ್ತನಾವಾದ) ತನ್ನ 50ನೇ ವರ್ಷದ ಸೇವೆಯನ್ನು ಯಶಸ್ವಿಯಾಗಿ ಪೂರೈಸಿದ ಹಿನ್ನೆಲೆಯಲ್ಲಿ ಸುವರ್ಣಮಹೋತ್ಸವ ಕಾರ್ಯಕ್ರಮವನ್ನು ಅ.23ರ ಬುಧವಾರ ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಸಂಘರ್ಷ ಸಮಿತಿ(ಪರಿವರ್ತನಾವಾದ) ಕಲಾಮಂಡಳಿ ರಾಜ್ಯಾಧ್ಯಕ್ಷ ಕೆ.ಟಿ.ಮುತ್ತುರಾಜ್ ತಿಳಿಸಿದ್ದಾರೆ. ಅವರು, ನಗರದ ಪ್ರವಾಸಿಮಂದಿರದಲ್ಲಿ ಕಾರ್ಯಕ್ರಮದ ವಿವರದ ಕರಪತ್ರವನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಈ ತಿಂಗಳ 23ರಂದು ನಡೆಯುವ ಸುವರ್ಣ ಮಹೋತ್ಸವದಲ್ಲಿ ಹೆಚ್ಚಿ ಸಂಖ್ಯೆಯ ದಲಿತ ಬಂಧುಗಳು ಭಾಗವಹಿಸುವಂತೆ ಮನವಿ ಮಾಡಿದರು. ಜಿಲ್ಲಾ ಪ್ರಧಾನ ಸಂಚಾಲಕ ಹೆಗ್ಗೆರೆ ಮಂಜುನಾಥ, ತಾಲ್ಲೂಕು ಸಂಚಾಲಕ ಗೋವಿಂದಪ್ಪ, ಪೆನ್ನೇಶ, ಮಂಜುನಾಥ, ಶ್ರವಣಕುಮಾರ್, ಅಂಜಿನಪ್ಪ ಮುಂತಾದವರು ಇದ್ದರು.

### ತಂಬಾಕು ಪರವಾನಗಿ ತರಬೇತಿ ಕಾರ್ಯಾಗಾರ




» **ದಾವಣಗೆರೆ**

ನಮ್ಮ ಯುವ ಪೀಳಿಗೆ ತಂಬಾಕಿಗೆ ಹಾಗೂ ಮಾದಕ ವಸ್ತುಗಳಿಗೆ ಬಲಿ ಯಾಗುವುದನ್ನು ತಡೆಗಟ್ಟುವುದು ಅನಿವಾರ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು. ಮಂಗಳವಾರ (ಅ.8) ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ತಂಬಾಕು ಉತ್ಪನ್ನಗಳ ವ್ಯಾಪಾರಸ್ಥರಿಗೆ ಪ್ರತ್ಯೇಕ ಪರವಾನಗಿ ನೀಡುವ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಏರ್ಪಡಿಸಲಾದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತಾನಾಡಿದರು. ಯುವ ಜನರು ತಂಬಾಕು ತಪ್ಪನ್ನಗಳಿಗೆ ಬಲಿಯಾಗುವುದನ್ನು ತಡೆಟ್ಟಲುಮಾರ್ಗಸೂಚಿಅನ್ವಯಪರವಾನಗಿಯನ್ನು ಕಡ್ಡಾಯವಾಗಿ ಅನುಷ್ಠಾನ ಮಾಡುವುದು ಹಾಗೂ ಶಾಲಾ, ಕಾಲೇಜುಗಳ ಸುತ್ತ ಮುತ್ತ ಇರುವ ಅಂಗಡಿಗಳಿಗೆ ಕೋಟ್ಪಾ ಕಾಯ್ದೆಯ ಅನುಸಾರ ಕ್ರಮ ವಹಿಸುವುದು ಹಾಗೂ ತಂಬಾಕು ಮುಕ್ತ ಯುವ ಪೀಳಿಗೆಗಾಗಿ ನಾವೆಲ್ಲರೂ ಶ್ರಮವಹಿಸಬೇಕಾಗಿದೆ ಎಂದು ತಿಳಿಸಿದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ॥ ರಾಘವನ್ ಜಿ.ಡಿ ಮಾತಾನಾಡಿ ಈಗಾಗಲೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ಉದ್ಯಮ ಪರವಾನಗಿ ಅನುಷ್ಠಾನಗೊಂಡಿದ್ದು ರಾಜ್ಯದಲ್ಲಿ ಮಾದರಿ ಮಹಾನಗರ ಪಾಲಿಕೆಯಾಗಿದೆ. ಅದೇ ರೀತಿ ಜಿಲ್ಲೆಯ ಎಲ್ಲಾ ನಗರ ಸ್ಥಳಿಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸುವುದು ಈ ತರಬೇತಿಯ ಉದ್ದೇಶವಾಗಿದೆ. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಸತೀಶ ಕಲಾಹಾಳ ಮಾತಾನಾಡಿ ತಂಬಾಕಿನಿಂದ ಉಂಟಾಗುವ ದುಷ್ಪರಿಣಾಮಗಳು ಹಾಗೂ ಯುವಕರು ದುಶ್ಚಟಗಳಿಗೆ ಬಲಿಯಾಗುವುದರ ಕುರಿತು ವೀಡಿಯೊ ಪ್ರದರ್ಶನದ ಮೂಲಕ ಎಲ್ಲಾ ತಂದೆ, ತಾಯಿಂದಿರು ತಮ್ಮ ಮಕ್ಕಳ ಬಗ್ಗೆ ಗಮನಹರಿಸಲು ಮಾಹಿತಿ ನೀಡಿದರು. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದಡಾ.ಎನ್‌ಮಹಂತೇಶ,ವಿಭಾಗೀಯ ಸಂಯೋಜಕರಾದ ಮಹಾಂತೇಶ.ಬಿ.ಉಳ್ಳಾಗಡ್ಡಿ, ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿ ಡಾ॥ ಚಂದ್ರಮೋಹನ್, ಹರಿಹರ ನಗರಸಭೆಯ ಪೌರಾಯುಕ್ತರಾದ ಸುಬ್ರಮಣ್ಯ ಪಿ, ಚನ್ನಗಿರಿ ಪುರಸಭೆ ಮುಖ್ಯಾಧಿಕಾರಿ ಕೃಷ್ಣ ಡಿ.ಕಟ್ಟಿಮನಿ, ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಕರು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ನ ಆರೋಗ್ಯ ನಿರೀಕ್ಷಕರುಗಳು ಹಾಜರಿದ್ದರು.

### ಸಮನ್ವಯ ಸಮಿತಿ ಸಭೆ

» **ದಾವಣಗೆರೆ**

ರಾಷ್ಟ್ರೀಯ ಕುಷ್ಠರೋಗ ಕುಷ್ಠರೋಗ ಅಭಿಯಾನ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಕಚೇಯಲ್ಲಿ ಹಾಗೂ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 10 ರಂದು ಮಧ್ಯಾಹ್ನ 3 ಗಂಟೆಗೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ; ಷಣ್ಮುಖಪ್ಪ ತಿಳಿಸಿದ್ದಾರೆ.

## ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆ

# ಗ್ಯಾರಂಟಿ ಯೋಜನೆ ಫಲಾನುಭವಿಗಳ ಕೆವೈಸಿ ಅಪ್‌ಡೇಟ್ ಮಾಡಲು ಸೂಚನೆ

» **ದಾವಣಗೆರೆ**

ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಬ್ಯಾಂಕ್ ಕೆವೈಸಿ, ಬಯೋಮೆಟ್ರಿಕ್ ಮೂಲಕ ಅವರ ಖಾತೆಗೆ ಹಣ ಜಮೆಯಾಗುವಂತೆ ಕ್ರಮ ವಹಿಸಲಾಗುವುದೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು ಟಿ ಬಸವರಾಜ ತಿಳಿಸಿದರು.

ಅವರು (ಅ.8) ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಹಶೀಲ್ದಾರರು ಹಾಗೂ ಉಪವಿಭಾಗಾಧಿಕಾರಿಗಳು ಜಂಟಿಯಾಗಿ ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪಡಿತರ ವಿತರಣೆ, ಪಡಿತರ ಧಾನ್ಯಗಳ ವಿತರಣೆಯಲ್ಲಿ ಆಗುವ ತೂಕದ ವ್ಯತ್ಯಾಸ, ಆಹಾರಧಾನ್ಯಗಳ ಗುಣಮಟ್ಟ ಪರಿಶೀಲನೆ ಮಾಡುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಮಾತನಾಡುತ್ತಾ, ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ನಾಗರಿಕರಿಗೂ ಸಿಗುವಂತಾಗಬೇಕು. ಆದ್ದರಿಂದ ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯೋಜನೆಗಳ ಮಾಹಿತಿ ಕುರಿತು ಆಂದೋಲನ ಕೈಗೊಳ್ಳಬೇಕೆಂದು ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.



ಈ ಯೋಜನೆಗಳು ಯಾರಿಗೆ ತಲುಪುತ್ತಿಲ್ಲ, ಅಂತವರಿಗೆ ಅರವು ಮೂಡಿಸಬೇಕು. ನ್ಯಾಯಬೆಲೆ ಅಂಗಡಿಗಳಲ್ಲಿ ದಾಸ್ತಾನು ನೀಡುವ ಸಮಯದ ವೇಳಾಪಟ್ಟಿಯನ್ನು ಸೂಚನಾ ಫಲಕದಲ್ಲಿ ಅಳವಡಿಸಬೇಕು ಎಂದು ತಿಳಿಸಿದರು.

ಅನ್ನಭಾಗ್ಯ ಯೋಜನೆಯ ಕುರಿತು ಉಪನಿರ್ದೇಶಕರು ಮಾಹಿತಿ ನೀಡಿ ದಾವಣಗೆರೆ ಜಿಲ್ಲೆಯಲ್ಲಿ ಜುಲೈ 2023 ರಿಂದ ಜೂನ್ 2024 ರವರೆಗೆ ಒಟ್ಟಾರೆ 341792 ಪಡಿತರ ಚೀಟಿದಾರರಿದ್ದು, ಅದರಲ್ಲಿ 1226537 ಫಲಾನುಭವಿಗಳು ಅನ್ನಭಾಗ್ಯ ಯೋಜನೆ ವ್ಯಾಪ್ತಿಗೆ ಬರುತ್ತಿದ್ದು, ಈ ಎಲ್ಲಾ ಫಲಾನುಭವಿಗಳಿಗೆ ಐದು ಕೆಜಿ ಅಕ್ಕಿಯ ಹಣವನ್ನು ಡಿ.ಬಿ.ಟಿ. ಮೂಲಕ ಪ್ರತಿ ತಿಂಗಳು ಪಾವತಿಸಲಾಗಿದೆ. 2023 ರ ಜುಲೈ ನಿಂದ 2024 ರ ಜುಲೈವರೆಗೆ ರೂ.247.28 ಕೋಟಿ ವೆಚ್ಚ ಮಾಡಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಮಾಹಿತಿ ನೀಡಿ ಗೃಹಲಕ್ಷ್ಮಿ ಯೋಜನೆಯಡಿ ಎಲ್ಲಾ ತಾಲ್ಲೂಕುಗಳಿಂದ 366937 ಫಲಾನುಭವಿಗಳು ನೊಂದಣಿಯಾಗಿದ್ದು ಇದರಲ್ಲಿ 358289 ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಯೋಜನೆ ಆರಂಭವಾದ 2023 ರ ಆಗಸ್ಟ್‌ನಿಂದ 2024 ರ ಮಾರ್ಚ್‌ವರೆಗೆ ರೂ.751.38 ಕೋಟಿ ಡಿಬಿಟಿ ಮೂಲಕ ಮಹಿಳೆಯರಿಗೆ ಪಾವತಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಚಾಲ್ತಿಯಲ್ಲಿರುವ 487228 ಸ್ಥಾವರಗಳಲ್ಲಿ 433758 ಸ್ಥಾವರಗಳ ಫಲಾನುಭವಿಗಳು ಇದರ ಲಾಭ ಪಡೆಯುತ್ತಿದ್ದು 53470 ಆರ್. ಆರ್.ಸಂಖ್ಯೆಯವರು ಮಾತ್ರ ಗೃಹಜ್ಯೋತಿ ಯೋಜನೆಗೆ ನೋಂದಣಿಯಾಗಿರುವುದಿಲ್ಲ ಎಂದು ಮಾಹಿತಿ ನೀಡಿದರು.

ಶಕ್ತಿ ಯೋಜನೆಯಡಿ ದಾವಣಗೆರೆ ವಿಭಾಗ ವ್ಯಾಪ್ತಿಯಲ್ಲಿ 11 ಜೂನ್ 2023 ರಿಂದ ಸೆಪ್ಟೆಂಬರ್ 2024 ರವರೆಗೆ ಒಟ್ಟಾರೆ 5,02,97,487 ಪ್ರಯಾಣಿಕರು ಬಸ್‌ಗಳಲ್ಲಿ ಸಂಚರಿಸಿದ್ದು, ಪ್ರಯಾಣ ವೆಚ್ಚವಾಗಿ ಒಟ್ಟು ರೂ.136,65,25,048 ಗಳನ್ನು ಸರ್ಕಾರ ಭರಿಸುತ್ತಿದೆ ಎಂದು ಮಾಹಿತಿ ನೀಡಿದರು.

ಯುವನಿಧಿ ಯೋಜನೆಯಡಿ ಜನವರಿ 2024 ರಿಂದ ಜುಲೈ 2024ರವರೆಗೆ 12243 ಪದವಿ ಫಲಾನುಭವಿಗಳಿಗೆ ಡಿ.ಬಿ.ಟಿ. ಮೂಲಕ ಪಾವತಿಯಾದ ಮೊತ್ತ ರೂ.3,67,29,000, ಹಾಗೂ 147 ಡಿಪ್ಲೊಮೋ ಫಲಾನುಭವಿಗಳಿಗೆ ರೂ.2,20,500 ಗಳನ್ನು ಪಾವತಿಸಲಾಗಿದೆ.

ಸಭೆಯಲ್ಲಿ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರುಗಳಾದ ಕೆ.ಎನ್. ಮಂಜುನಾಥ, ನಂಜಾನಾಯ್ಕ, ಅನೀಫ್ ಪಾಷಾ ಹಾಗೂ ಅನುಷ್ಠಾನ ಸಮಿತಿಯ ಎಲ್ಲಾ ಸದಸ್ಯರುಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಉಪಸ್ಥಿತರಿದ್ದರು.

# ಸೌಹಾರ್ದ ಯಾತ್ರೆಗೆ ತಾಜ್‌ಪೀರ್ ಚಾಲನೆ

» **ಚಿತ್ರದುರ್ಗ**

ಎಲ್ಲಾ ಜಾತಿ ಧರ್ಮದವರು ಸೌಹಾರ್ಧತೆಯಿಂದ ಬದುಕುತ್ತಿರುವುದರಿಂದ ಭಾರತಕ್ಕೆ ಸರ್ವ ಜನಾಂಗದ ಶಾಂತಿಯ ತೋಟ ಎನ್ನುವ ಹೆಗ್ಗಳಿಕೆಯಿದೆ ಎಂದು ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ದಮ್ಮ ಸಾಂಸ್ಕೃತಿಕ ಕೇಂದ್ರ, ಕರ್ನಾಟಕ ಶಾಂತಿ ಮತ್ತು ಸೌಹಾರ್ಧ ವೇದಿಕೆ ವತಿಯಿಂದ ಸ್ಟೇಡಿಯಂ ಸಮೀಪವಿರುವ ಬುದ್ದನ ಪ್ರತಿಮೆ ಮುಂಭಾಗದಿಂದ ಮಂಗಳವಾರ ಹೊರಟ ಸೌಹಾರ್ಧ ಯಾತ್ರೆಗೆ ಚಾಲನೆ ನೀಡಿ ಮಾತನಾಡಿದರು.




ಪ್ರತಿ ಶಾಲಾ ಕಾಲೇಜುಗಳಲ್ಲಿ ವಾರಕ್ಕೊಂದು ದಿನವಾದರೂ ಸೌಹಾರ್ಧ ಯಾತ್ರೆ ಭೇಟಿ ನೀಡಿ ವಿದ್ಯಾರ್ಥಿಗಳಲ್ಲಿ ಶಾಂತಿ ಸೌಹಾರ್ಧತೆಯ ಸಂದೇಶ ನೀಡಬೇಕು. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ ಹಿರಿಯರ ಇತಿಹಾಸಗಳನ್ನು ಯುವ ಪೀಳಿಗೆಗೆ ತಿಳಿಸಬೇಕೆಂದರು.

ದಮ್ಮ ಸಾಂಸ್ಕೃತಿಕ ಕೇಂದ್ರದ ಆರ್.ವಿಶ್ವಸಾಗರ್ ಮಾತನಾಡಿ ಜಾತಿ ಧರ್ಮಗಳ ನಡುವೆ ಕೋಮು ಸೌಹಾರ್ಧತೆ ಮೂಡಿಸುವ ಉದ್ದೇಶದಿಂದ ಹೊರಟಿರುವ ಸೌಹಾರ್ಧ ಯಾತ್ರೆ ಕಣಿವೆಮಾರಮ್ಮ ದೇವಸ್ಥಾನ, ಚರ್ಚ್, ಮಸೀದಿ, ಸೂಫಿ ಸಂತರ ಜಾಗಗಳಿಗೆ ತೆರಳಿ ದ್ವೇಷ ಭಾವನೆ ಮೂಡಿಸುವ ಬದಲು ಎಲ್ಲಾ ಜಾತಿ ಧರ್ಮದವರು ಸ್ನೇಹ ಸಹಭಾಳ್ವೆಯಿಂದ ಬದುಕುವ ಸಂದೇಶ ನೀಡುವುದು ಯಾತ್ರೆಯ ಉದ್ದೇಶ ಎಂದು ಹೇಳಿದರು.

ಕರ್ನಾಟಕ ಶಾಂತಿ ಮತ್ತು ಸೌಹಾರ್ಧ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್ ಮಾತನಾಡಿ ನೆಲಮೂಲದ ಸಂಸ್ಕೃತಿ ಹೊಂದಿರುವ ಭಾರತದಲ್ಲಿ ಶಾಂತಿ ಸೌಹಾರ್ಧತೆಯಿಂದ ಬದುಕುವ ವಾತಾವರಣ ಸೃಷ್ಠಿಯಾಗಬೇಕಿದೆ. ಅಸಮಾನತೆ, ಅಶಾಂತಿಯನ್ನು ಹೋಗಲಾಡಿಸಿ ಎಲ್ಲರೂ ಪ್ರೀತಿ ಸಹೋದರತ್ವದಿಂದ ಬದುಕುವಂತಾಗಬೇಕೆನ್ನುವುದು ನಮ್ಮ ಉದ್ದೇಶ. ಹಾಗಾಗಿ ಬುದ್ದ, ಶರಣರು, ಸಾಧು ಸಂತರ ವಿಚಾರಗಳನ್ನು ಎಲ್ಲೆಡೆ ಬಿತ್ತಬೇಕಾಗಿದೆ. ದೇವಸ್ಥಾನ, ಚರ್ಚ್, ಮಸೀದಿಗಳಿಗೆ ಸೌಹಾರ್ಧ ಯಾತ್ರೆ ಸಂಚರಿಸಲಿದೆ ಎಂದರು.

ಅನ್ನಪೂರ್ಣಮ್ಮ ವಿಶ್ವಸಾಗರ್, ಬೀಬಿಜಾನ್, ನಾಗರತ್ನ,ಅರಣ್ಯಸಾಗರ್,ಫಾದರ್‌ಅಲೆಕ್ಸಾಂಡರ್, ಚಂದ್ರಶೇಖರ್, ಮುರುಗನ್, ಅಬ್ದುಲ್ ರೆಹಮಾನ್, ದಾದಾಪೀರ್‌ಡಾ.ರಹಮತ್‌ವುಲ್ಲಾ, ರಹಮಾನ್, ಬಾಬು ಎಂ.ಆರ್.ನಗರ, ತಸ್ಮಿಯ, ಸ್ಪೂರ್ತಿ, ಮಾರುತಿನಗರದ ರಿಹಾನ್, ತನ್ವೀರ್, ಶಾಹಿನಭಾನು, ಅಖಿಲಭಾನು, ಕಾನೂನು ವಿದ್ಯಾರ್ಥಿ ಅನಿಲ್, ಆಕಾಶ್ ಎಂ. ಮಂಜುನಾಥ್ ಡಿ. ಇನ್ನು ಮುಂತಾದವರು ಸೌಹಾರ್ಧ ಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

### ಬಿಜೆಪಿ ನಗರ ಘಟಕ ಸದಸ್ಯತ್ವ ಅಭಿಯಾನಕ್ಕೆ ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಚಾಲನೆ




» **ಚಿತ್ರದುರ್ಗ**

ನಗರದ 35 ವಾರ್ಡ್‌ಗಳಲ್ಲಿ ಸಮಿತಿ ರಚಿಸಿ ಹೆಚ್ಚಿನ ಸದಸ್ಯತ್ವ ನೊಂದಾಯಿಸುವಂತೆ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಕರೆ ನೀಡಿದರು.ಬಿಜೆಪಿ.ಕಚೇರಿಯಲ್ಲಿ ಮಂಗಳವಾರ ನಡೆದ ಬಿಜೆಪಿ. ನಗರ ಘಟಕ ಸದಸ್ಯತ್ವ ಅಭಿಯಾನ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಕೇಂದ್ರ ಬಿಜೆಪಿ. ಸರ್ಕಾರ ಹಾಗೂ ರಾಜ್ಯದಲ್ಲಿ ಬಿಜೆಪಿ. ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಸವಲತ್ತುಗಳನ್ನು ಪಡೆದುಕೊಂಡಿರುವವರು ಪ್ರತಿ ಮನೆಯಲ್ಲಿಯೂ ಸಿಗುತ್ತಾರೆ. ಅಂತಹವರನ್ನು ಹುಡುಕಿ ಪಕ್ಷದ ಯೋಜನೆಗಳ ಕುರಿತು ಮನವರಿಕೆ ಮಾಡಿ ಹೆಚ್ಚಿನ ಸದಸ್ಯತ್ವ ಪಕ್ಷಕ್ಕೆ ಸೇರ್ಪಡೆಗೊಳಿಸುವಂತೆ ನಗರ ಪದಾಧಿಕಾರಿಗಳಿಗೆ ತಿಳಿಸಿದರು.

ಗಾರೆಹಟ್ಟಿ, ಮಾಳಪ್ಪನಹಟ್ಟಿ, ಕೋಣನಹಟ್ಟಿ, ದವಳಗಿರಿ ಬಡಾವಣೆ, ಬಿ.ವಿ.ಕೆ.ಎಸ್.ಲೇಔಟ್, ಕೆಳಗೋಟೆ, ಹೌಸಿಂಗ್‌ಬೋರ್ಡ್ ಕಾಲೋನಿ, ಸಿಹಿನೀರು ಹೊಂಡ, ರೈಲ್ವೆ ಸ್ಟೇಷನ್, ಮಾರುತಿನಗರ, ವಿಜಯನಗರ, ಜೈನ್‌ಕಾಲೋನಿ, ಗುಮಾಸ್ತ ಕಾಲೋನಿ, ಟೀಚರ್ಸ್ ಕಾಲೋನಿ, ಚನ್ನಬಸಪ್ಪ ಕಾಂಪೌಂಡ್, ಜೋಗಿಮಟ್ಟಿ ರೋಡ್, ಬಿ.ಎಲ್.ಗೌಡ ಲೇಔಟ್ ಹೀಗೆ ನಗರದೆಲ್ಲೆಡೆ ಸುತ್ತಾಡಿ ಎಲ್ಲೆಲ್ಲಿ ಪಕ್ಷದ ಮತಗಳು ಜಾಸ್ತಿಯಿವೆಯೋ ಅಲ್ಲೆಲ್ಲಾ ಹೆಚ್ಚು ಸದಸ್ಯತ್ವ ನೊಂದಾಯಿಸಿದರೆ ನಲವತ್ತರಿಂದ ಐವತ್ತು ಸಾವಿರ ದಾಟಬಹುದು. ಅದಕ್ಕಾಗಿ ಒಂದೊಂದು ವಾರ್ಡ್‌ಗಳಲ್ಲಿ ತಂಡ ಕಟ್ಟಿಕೊಳ್ಳಿ ಎಂದು ಹೇಳಿದರು.ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್, ಪ್ರಧಾನ ಕಾರ್ಯದರ್ಶಿ ಸಂಪತ್, ಯುವ ಮುಖಂಡ ಡಾ.ಸಿದ್ದಾರ್ಥ ಗುಂಡಾರ್ಪಿನಗರ ಮಂಡಲ ಅಧ್ಯಕ್ಷ ನವೀನ್, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ನಗರಸಭೆ ಸದಸ್ಯರುಗಳಾದ ಹೆಚ್.ಶ್ರೀನಿವಾಸ್, ಹರೀಶ್, ಯುವ ಮೋರ್ಚಾದ ರಾಮು ವಕ್ತಾರ ನಾಗರಾಜ್‌ಬೇದ್ರೆ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶ್ರೀಮತಿ ಶೈಲಜಾರೆಡ್ಡಿ ಹಾಜರಿದ್ದರು.

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸೇವಾಸಿಂಧು ಪೋರ್ಟಲ್ ಮೂಲಕ ಅಕ್ಟೋಬರ್.30 ರೊಳಗಾಗಿ ಸಲ್ಲಿಸಿ, ಸಲ್ಲಿಸಿದ ಅರ್ಜಿ ಮತ್ತು ದಾಖಲೆಗಳನ್ನು ಜಿಲ್ಲಾ ಸಂಯೋಜಕರು, ಡಾ.ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ನಿಗಮ, ದಾವಣಗೆರೆ ಇಲ್ಲಿಗೆ ಸಲ್ಲಿಸಲು ಹಾಗೂ ಮೊ.ಸಂ:9845801361, 8105976617 ನ್ನು ಸಂಪರ್ಕಿಸಲು ತಿಳಿಸಲಾಗಿದೆ.

## ಪ್ರಮುಖ ಸುದ್ದಿ

# ಕಳಪೆ ಗುಣಮಟ್ಟದ ಮೋಟಾರ್, ಪಂಪ್‌ಸೆಟ್ ವಿತರಿಸಿದರೆ ಕ್ರಮ: ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಎಚ್ಚರಿಕೆ

» **ದಾವಣಗೆರೆ**

ರೈತರಿಗೆ ಗುಣಮಟ್ಟದ ಮೋಟಾರ್ ಪಂಪ್‌ಸೆಟ್ ವಿತರಣೆ ಮಾಡಬೇಕು. ಒಂದು ವೇಳೆ ಕಳಪೆ ಗುಣಮಟ್ಟದ ಮೋಟಾರ್, ಪಂಪ್‌ಸೆಟ್ ಕೊಟ್ಟಿರುವುದು ಗಮನ ಬಂದರೆ ಸಂಬಂಧಪಟ್ಟವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳುವುದಾಗಿ ಶಾಸಕ ಕೆ.ಎಸ್.ಬಸವಂತಪ್ಪ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ಎಪಿಎಂಸಿ ಆವರಣದಲ್ಲಿ ಮಂಗಳವಾರ ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಡಾ.ಅಭಿವೃದ್ಧಿ ನಿಗಮದಿಂದ 2021-22ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿ (ಡಿಬಿಟಿ) ಕೊಳವೆಬಾವಿ ಕೊರೆಸಿದ 14 ಅರ್ಹ ಫಲಾನುಭವಿ ರೈತರಿಗೆ ಮೋಟಾರ್ ಪಂಪ್‌ಸೆಟ್, ಪರಿಕರ ವಿತರಿಸಿ ಅವರು ಮಾತನಾಡಿದರು.



ಕ್ಷೇತ್ರದ ವ್ಯಾಪ್ತಿಯಲ್ಲಿ ಈ ಹಿಂದೆ ಡಾಅಂಬೇಡ್ಕರ್, ಆದಿಜಾಂಬವ, ವಾಲ್ಮೀಕಿ ಸೇರಿದಂತೆ ವಿವಿಧ ಅಭಿವೃದ್ಧಿ ನಿಗಮಗಳಡಿ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆಸಿದ ಅರ್ಹ ಫಲಾನುಭವಿಗಳಿಗೆ ಕಳಪೆ ಗುಣಮಟ್ಟದ ಮೋಟಾರ್, ಪಂಪ್‌ಸೆಟ್, ಪರಿಕರ ವಿತರಣೆ ಮಾಡಲಾಗಿದೆ ಎಂದು ರೈತರಿಂದ ದೂರುಗಳು ಬಂದಿವೆ. ಹೀಗಾಗಿ ಕಳಪೆ ಗುಣಮಟ್ಟದ ಮೋಟಾರ್, ಪಂಪ್‌ಸೆಟ್, ಪರಿಕರ ವಿತರಣೆ ಮಾಡಿರುವುದು ಕಂಡು ಬಂದರೆ ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುವುದಾಗಿ ಎಚ್ಚರಿಕೆ ನೀಡಿದರು. ಮೋಟಾರ್, ಪಂಪ್‌ಸೆಟ್, ಪರಿಕರ ವಿತರಿಸುವಾಗ ಫಲಾನುಭವಿಗಳಿಂದ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರು ಬಂದಿವೆ. ಫಲಾನುಭವಿಗಳು ನನ್ನ ಗಮನಕ್ಕೆ ತಂದರೆ ಕ್ರಮ ತೆಗೆದುಕೊಳ್ಳಲಾಗುವುದು. ಫಲಾನುಭವಿಗಳು ಕೂಡ ಹಣ ಕೊಡಬಾರದು. ಸರ್ಕಾರ ಕೊಟ್ಟ ಸೌಲಭ್ಯಗಳನ್ನು ಸರಿಯಾಗಿ ತಲುಪಿಸುವುದು ಅಧಿಕಾರಿಗಳ ಕರ್ತವ್ಯ. ಕಂದಗಲ್ಲು ಗ್ರಾಮದ ಗಂಗಾಧರಪ್ಪ ಅವರಿಗೆ ಹಳೆ ಟಿಸಿ ಕೊಟ್ಟಿದ್ದು, ಕೂಡಲೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿ ವರದಿ ಕೊಡಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಬ್ಬಿಣದ ಮೀಟರ್ ಬೋರ್ಡ್‌ಗಳಿಂದ ಮಳೆ ಬಂದ ಸಂದರ್ಭದಲ್ಲಿ ವಿದ್ಯುತ್ ಅವಘಡಗಳು ಸಂಭವಿಸಿ ರೈತರು ಮೃತಪಟ್ಟಿರುವ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿವೆ. ಇನ್ಮುಂದೆ ರೈತರಿಗೆ ಫೈಬರ್ ಮೀಟರ್ ಬೋರ್ಡ್ಗಳನ್ನು ಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.ಇದೇ ಸಂದರ್ಭದಲ್ಲಿ ಕ್ಷೇತ್ರದ ವ್ಯಾಪ್ತಿಯ ಕುರ್ಕಿ, ಗುಮ್ಮನೂರು, ನರಸೀಪುರ, ನಲ್ಕುಂದ, ದಾಗಿನಕಟ್ಟೆ, ಬಾವಿಹಾಳು, ಮಾಯಕೊಂಡ, ಹೊಸಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳ ಅರ್ಹ ಫಲಾನುಭವಿ ರೈತರಿಗೆ ಮೋಟಾರ್, ಪಂಪ್‌ಸೆಟ್, ಪರಿಕರಗಳನ್ನು ವಿತರಿಸಲಾಯಿತು.ಈ ವೇಳೆ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ಬಸವರಾಜ್, ಫೀಲ್ಡ್ ಆಫೀಸರ್ ಮರಿಸ್ವಾಮಿ, ಗುತ್ತಿಗೆದಾರರು ಸೇರಿದಂತೆ ಇನ್ನಿತರರಿದ್ದರು.

**ಫಾಸ್ಟ್ ನ್ಯೂಸ್**

## ಶರಣ ಸಂಸ್ಕೃತಿ ಉತ್ಸವ: ಇಂದಿನ ಕಾರ್ಯಕ್ರಮಗಳು

- ಬೆಳಿಗ್ಗೆ 7.30 ಗಂಟೆಗೆ ಶಿವಯೋಗ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಇಳಕಲ್ ವಿಜಯಮಹಾಂತೇಶ್ವರ ಮಠದ ಶ್ರೀ.ನಿ.ಪ್ರ.ಸ್ವ. ಗುರು ಮಹಾಂತಸ್ವಾಮಿಗಳು ನಡೆಸಿಕೊಡಲಿದ್ದು, ಚನ್ನಗಿರಿ ಶ್ರೀ ಹಾಲಸ್ವಾಮಿ ವಿರಕ್ತಮಠದ ಡಾ.ಬಸವ ಜಯಚಂದ್ರ ಸ್ವಾಮಿಗಳು, ಮಾಗಡಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಚಂದ್ರಶೇಖರ ಸ್ವಾಮಿಗಳು, ಇರಕಲ್ ಶಿವಶಕ್ತಿ ಪೀಠದ ಶ್ರೀ ಬಸವ ಪ್ರಸಾದ ಸ್ವಾಮಿಗಳು, ಭಾಲ್ಕಿಯ ಶ್ರೀ ಸಿದ್ದರಾಮ ಪಟ್ಟದೇವರು, ಕೋಡಿಹಳ್ಳಿ ಹೆಳವ ಗುರುಪೀಠದ ಶ್ರೀ ಬಸವ ಭೃಂಗೇಶ್ವರ ಸ್ವಾಮಿಗಳು, ನಿಪ್ಪಾಣಿ ಶ್ರೀ ಮುರುಘೇಂದ್ರ ಮಠದ ಶ್ರೀ ಬಸವ ಮಲ್ಲಿಕಾರ್ಜುನ ಸ್ವಾಮಿಗಳು ಸಾನ್ನಿಧ್ಯ ವಹಿಸುವರು.
- ಮುಖ್ಯ ಅತಿಥಿಗಳಾಗಿ ಜಮಖಂಡಿ ಬಸವಕೇಂದ್ರದ ಶ್ರೀ ರವಿ ಯಡಹಳ್ಳಿ, ಹುಮನಾಬಾದ್ ಬಸವಕೇಂದ್ರದ ಶ್ರೀ ಕಾಶೀನಾಥ ಗಿರಿಮಲ್, ಧಾರವಾಡ ಬಸವಕೇಂದ್ರದ ಶ್ರೀ ಈಶ್ವರ ಸಾಣಿಕೊಪ್ಪ, ಬೀದರ್ ಕಲ್ಯಾಣ ಪ್ರತಿಷ್ಠಾನದ ಶ್ರೀ ಬಸವಕುಮಾರ್ ಪಾಟೀಲ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.
- ಬೆಳಿಗ್ಗೆ 10.00ಗಂಟೆಗೆ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ವಿಚಾರ ಸಂಕೀರಣ -1 ರಲ್ಲಿ ಜಯದೇವ ಜಗದ್ಗುರುಗಳ ಜೀವನ ಮತ್ತು ಸಾಧನೆ ಕುರಿತ ವಿಷಯ ಮಂಡನೆ ಕಾರ್ಯಕ್ರಮದಲ್ಲಿ ಅಖಿಲ ಭಾರತ ಜಾಗತಿಕ ಲಿಂಗಾಯತ ಮಹಾಸಭಾದ ಅಧ್ಯಕ್ಷರಾದ ಶ್ರೀ.ಎಸ್.ಎಂ.ಜಾಮದಾರ್, ಐ.ಎ.ಎಸ್ (ನಿ) ಆಧ್ಯಕ್ಷತೆ ವಹಿಸಿಲಿದ್ದು, ಡಾ.ಬಿ.ರಾಜಶೇಖರಪ್ಪ : ಶೂನ್ಯಪೀಠ  ಮುರುಘಾ ಪರಂಪರೆಯಲ್ಲಿ ಜಯದೇವ ಜಗದ್ಗುರುಗಳು, ಬೆಂಗಳೂರಿನ ಬಿ.ಎಂ.ಶ್ರೀ. ಪ್ರತಿಷ್ಠಾನದ ಅಧ್ಯಕ್ಷರಾದ ಡಾ. ಭೈರಮಂಗಲ ರಾಮೇಗೌಡ : ಜಯದೇವ ಜಗದ್ಗುರುಗಳು ಸಾಹಿತ್ಯ ಸಂಸ್ಕೃತಿ ಪ್ರೀತಿ, ಸಾಹಿತಿ ಶ್ರೀ ಪ್ರಕಾಶ್ ಗಿರಿಮಲ್ಲಣ್ಣನವರ್: ಜಯದೇವ ಜಗದ್ಗುರುಗಳ ಬಾಲ್ಯ ಮತ್ತು ಶಿಕ್ಷಣ, ಸಂಶೋಧಕರಾದ ಪ್ರೊ. ಲಕ್ಷ್ಮಣ್ ತೆಲಗಾವಿ : ಜಯದೇವ ಜಗದ್ಗುರುಗಳು ಅರಮನೆ-ಗುರುಮನೆ ಕುರಿತು ವಿಷಯ ಮಂಡನೆ ಮಾಡಲಿದ್ದಾರೆ. ಹೊಸಪೇಟೆಯ ಸಾಹಿತಿಗಳಾದ ಶ್ರೀ ಮೃತ್ಯುಂಜಯ ರುಮಾಲೆ, ಧಾರವಾಡದ ಸಾಹಿತಿಗಳಾದ ಡಾ.ಎಸ್.ಆರ್.ಗುಂಜಾಳ, ಡಾ. ವೀರಣ್ಣ ರಾಜೂರ, ಬೆಂಗಳೂರಿನ ಇತಿಹಾಸ ಅಕಾಡೆಮಿಯ ಶ್ರೀ ಕೆ.ಎಲ್.ರಾಜಶೇಖರ್ ಇವರುಗಳನ್ನು ಸನ್ಮಾನಿಸಲಾಗುವುದು.
- ಸಂಜೆ 6.00ಗಂಟೆಗೆ ಅನುಭವ ಮಂಟಪದಲ್ಲಿ ಜಯದೇವ ಜಗದ್ಗುರುಗಳ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ರಾಜನಹಳ್ಳಿ ಶ್ರೀ ವಾಲ್ಮೀಕಿ ಗುರುಪೀಠದ ಶ್ರೀ ಜಗದ್ಗುರು ಪ್ರಸನ್ನಾನಂದ ವಾಲ್ಮೀಕಿ ಸ್ವಾಮಿಗಳು, ಧಾರವಾಡ ಶ್ರೀ ಮುರುಘಾಮಠದ ಶ್ರೀ.ಮ.ನಿ.ಪ್ರ. ಮಲ್ಲಿಕಾರ್ಜುನ ಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್.ಯಡಿಯೂರಪ್ಪ, ಭಾರತ ಸರ್ಕಾರದ ರಾಜ್ಯ ರೈಲ್ವೆ ಸಚಿವರಾದ ಶ್ರೀ.ವಿ.ಸೋಮಣ್ಣ, ಮಾಜಿ ಮುಖ್ಯಮಂತ್ರಿಗಳು ಹಾಗು ಸಂಸದರಾದ ಶ್ರೀ ಜಗದೀಶ್ ಶೆಟ್ಟರ್, ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ, ಹೊಳಲ್ಕೆರೆ ಶಾಸಕರಾದ ಶ್ರೀ.ಚಂದ್ರಪ್ಪ.ಎಂ; ವಿಧಾನ ಪರಿಷತ್ ಶಾಸಕರಾದ ಶ್ರೀ. ಕೆ.ಎಸ್.ನವೀನ್, ಮಾಜಿ ಕೇಂದ್ರ ಸಚಿವರಾದ ಶ್ರೀ. ಜಿ.ಎಂ.ಸಿದ್ದೇಶ್ವರ, ಮಾಜಿ ಶಾಸಕರಾದ ಶ್ರೀ. ಜಿ.ಹೆಚ್.ತಿಪ್ಪಾರೆಡ್ಡಿ, ಹರಿಹರ ಮಾಜಿ ಶಾಸಕರಾದ ಶ್ರೀ. ಎಚ್.ಎಸ್.ಶಿವಶಂಕರ್ ಆಗಮಿಸುವರು. ತುಮಕೂರಿನ ಶ್ರೀ ಜಯದೇವ ವಿದ್ಯಾರ್ಥಿ ನಿಲಯದ ಆಡಳಿತ ಮಂಡಳಿ ಸದಸ್ಯರು ಉಪಸ್ಥಿತರಿರುವರು.
- ಕಾರ್ಯಕ್ರಮದಲ್ಲಿ ಡಾ.ಸಿ.ಎನ್. ಮಂಜುನಾಥ್, ಸಂಸದರು, ಮಾಜಿ ನಿರ್ದೇಶಕರು, ಶ್ರೀ ಜಯದೇವ ಹೃದ್ರೋಗ ಸಂಸ್ಥೆ ಬೆಂಗಳೂರು, ಶ್ರೀ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕರಾದ ಡಾ.ಕೆ.ಎಸ್.ರವೀಂದ್ರನಾಥ್, ಶ್ರೀ ಸೋಮಶೇಖರ್.ಸಿ, ನಿವೃತ್ತ ಐ.ಎ.ಎಸ್ ಅಧಿಕಾರಿಗಳು, ಜಯದೇವ ಹಾಸ್ಟೆಲ್ ಹಳೆಯ ವಿದ್ಯಾರ್ಥಿ ಬೆಂಗಳೂರು, ಕೆ.ಎಸ್.ಎಂ.ಸಿ, ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ.ಜಯವಿಭವ ಸ್ವಾಮಿ, ಐ.ಎ.ಎಸ್ ಇವರುಗಳನ್ನು ಸನ್ಮಾನಿಸಲಾಗುವುದು.
- ಸಾಂಸ್ಕೃತಿಕ ಸಂಭ್ರಮದಲ್ಲಿ ಚಿತ್ರದುರ್ಗದ ಸರಿಗಮ ಸಂಗೀತ ಪಾಠಶಾಲೆಯ ಶ್ರೀ.ಸುಚಿತ್ ಕುಲಕರ್ಣಿ ಇವರಿಂದ ಸಂಗೀತ ಕಾರ್ಯಕ್ರಮ.

# ಕೃಷಿ ಸಮಸ್ಯೆ ಮತ್ತು ಪರಿಹಾರೋಪಾಯಗಳು





ಜಯದೇವ ಜಗದ್ಗುರುಗಳು 150ನೇ ಜಯಂತ್ಯುತ್ಸವ ಅಂಗವಾಗಿ ಕೃಷಿ ಮೇಳ, ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನ, ಜೊಡೆತ್ತು ಪ್ರದರ್ಶನ ಮತ್ತು ಸಾಕು ಪ್ರಾಣಿಗಳ ಪ್ರದರ್ಶನ ಆಯೋಜಿಸಲಾಗಿತ್ತು. ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನವನ್ನು ಕರ್ನಾಟಕ ಸರ್ಕಾರದ ಸಾರಿಗೆ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿ ನೆರವೇರಿಸಿದರು. ಕಾರ್ಯಕ್ರಮವನ್ನು ರೈತ ಗೀತೆಯೊಂದಿಗೆ ಪ್ರಾರಂಭಿಸಲಾಯಿತು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಜಿಲ್ಲಾ ಶರಣ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಕೆ.ಎಂ. ವೀರೇಶ್ ಸ್ವಾಗತಿಸಿದರು.

ಕರ್ನಾಟಕ ಸರ್ಕಾರದ ಸಾರಿಗೆ ಸಚಿವರಾದ ಶ್ರೀ ರಾಮಲಿಂಗಾರೆಡ್ಡಿಯವರು ಮಾತನಾಡಿ ನಮ್ಮ ಕ್ಷೇತ್ರದ 23 ಸರ್ಕಾರಿ ಶಾಲೆಗಳನ್ನು ಐಟೆಕ್ ಶಾಲೆಗಳನ್ನಾಗಿ ಪರಿವರ್ತನೆ ಮಾಡಿ ದತ್ತು ಸ್ವೀಕರಿಸಿ ಅವುಗಳನ್ನುಮಾದರಿ ಶಾಲೆಗಳನ್ನಾಗಿ ಮಾಡಿದ್ದೇವೆ. 1963 ರಲ್ಲಿ ಬರಗಾಲ ಬಂದಾಗ ಹೆಚ್ಚು ಇಳುವರಿ ಬೇಕು ಎನ್ನುವ ಕಾರಣಕ್ಕಾಗಿ ರಾಸಾಯನಿಕೆಗಳನ್ನು ಬಳಸಿ ರೈತ ಕೃಷಿ ಮಾಡಲು ಆರಂಭಿಸಿದೆವು. ಅದಕ್ಕಿಂತ ಹಿಂದೆ ಎಲ್ಲಾ ಕಡೆಯೂ ಸಾವಯವ ಕೃಷಿಯನ್ನೇ ರೈತರು ಮಾಡುತ್ತಿದ್ದರು ಎಂದರು. ಜಯದೇವ ಜಗದ್ಗುರುಗಳು ಜಯದೇವ ಹೃದ್ರೋಗ ಆಸ್ಪತ್ರೆ ತೆರೆಯಲು ಕಾರಣರಾದವರು ಅಂತ ಶ್ರೀಗಳ 150 ನೇ ಜಯಂತಿ ಅಂಗವಾಗಿ ಚಿತ್ರದುರ್ಗ ಜಿಲ್ಲೆಯಲ್ಲೂ ಜಯದೇವ ಹೃದ್ರೋಗಾಲಯವನ್ನು ತೆರೆಯಲು ಅಧಿವೇಶನದಲ್ಲಿ ಒತ್ತಾಯಮಾಡುವುದಾಗಿ ತಿಳಿಸಿದರು.

ಎಸ್.ಜೆ.ಎಂ. ವಿದ್ಯಾಪೀಠದ ಅಧ್ಯಕ್ಷರಾದ ಶ್ರೀ ಶಿವಯೋಗಿ ಕಳಸದ ಮಾತನಾಡಿ ನಮ್ಮ ರಾಜ್ಯದಲ್ಲಿ ಸಾವಯವ ಕೃಷಿಯನ್ನು ಬೆಳೆಯಲು ಯಾವುದೇ ತೊಂದರೆ ಇಲ್ಲ. ಆದರೆ ರೈತನು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆ ಸಿಗಬೇಕಿದೆ. ಶೇ. 70% ಕ್ಕಿಂತ ಹೆಚ್ಚು ಕೃಷಿಕರು ಈ ದೇಶದಲ್ಲಿ ಇನ್ನು ಹೆಚ್ಚಿನ ಉತ್ಪಾದನೆಗೆ ಗಮನ ಹರಿಸಬೇಕು. ಕೃಷಿ ಪದವಿಯ ನಂತರ ವಿದ್ಯಾರ್ಥಿಗಳು ಮರಳಿ ತಮ್ಮ ಊರಿಗೆ ಬಂದು ವೈಜ್ಞಾನಿಕ ಕೃಷಿಯನ್ನು ಬೆಂಬಲಿಸ ಬೇಕಾಗಿದೆ, ಶರಣ ಸಂಸ್ಕೃತಿ ಉತ್ಸವ ನಿಮ್ಮೆಲ್ಲರ ಮನೆ ಮನೆ ಹಬ್ಬವಾಗಿದೆ ಎಂದರು.

ತುಮಕೂರು ಶ್ರೀ ಸಿದ್ಧಗಂಗಾ ಕ್ಷೇತ್ರದ ಶ್ರೀ ನಿ.ಪ್ರ.ಸ್ವ. ಸಿದ್ಧಲಿಂಗ ಮಹಾಸ್ವಾಮಿಗಳು ಮಾತನಾಡಿ ಮಧ್ಯ ಕರ್ನಾಟಕದಲ್ಲಿ ನಡೆಯುವ ಬಹದೊಡ್ಡ ಉತ್ಸವ ಎಂದರೆ ಶರಣ ಸಂಸ್ಕೃತಿ ಉತ್ಸವವಾಗಿದೆ. ಶರಣ ಸಂಸ್ಕೃತಿ ಉತ್ಸವದ ಮೂಲಕ ರೈತರಿಗೆ ಮಕ್ಕಳಿಗೆ ಸಾಂಸ್ಕೃತಿಕ ವಿಷಯಗಳಿಗೆ ಒತ್ತು ನೀಡುತ್ತಾ ಬಂದಿದ್ದಾರೆ. ಅದರಲ್ಲಿ ಕೃಷಿಗೆ ಹೆಚ್ಚಿನ ಮಹತ್ವವನ್ನು ಶ್ರೀ ಮಠ ನೀಡುತ್ತಾ ಬಂದಿದೆ. ಡಾಕ್ಟರ್ ಆಗಲು ಇಂಜಿನಿಯರ್ ಆಗಲು ಎಲ್ಲಾ ಮಕ್ಕಳು ಕೈ ಎತ್ತಿದರೇ ರೈತರಾಗಲು ಅಥವ ಕೃಷಿಕನಾಗಲು ಯಾವ ಮಕ್ಕಳು ಕೈ ಎತ್ತುವುದಿಲ್ಲ . ಕಾರಣ ರೈತನ ಕೆಲಸ ಕಷ್ಟದ ಕೆಲಸ ಚಳಿ, ಮಳೆ ಗಾಳಿ ಬಿಸಿಲನ್ನು ಲೆಕ್ಕಿಸದೆ ರೈತನು ಕೆಲಸ ಮಾಡಬೇಕಿದೆ. ಕೃಷಿ ಮಾಡಲು ಮನೆಮಂದಿ ಎಲ್ಲಾ ಬೇಕು. ಇವತ್ತಿನ ಆಹಾರದಿಂದ ಆರೋಗ್ಯ ಹದಗೆಡುತ್ತಿದೆ. ಜಯದೇವ ಜಗದ್ಗರುಗಳ ದೂರ ದೃಷ್ಟಿ ಅಪಾರವಾದದ್ದು ಆಕಾಲದಲ್ಲಿಯೇ ನಾಡಿನಾದ್ಯಂತ ವಿದ್ಯಾರ್ಥಿನಿಲಯಗಳನ್ನು ನಿರ್ಮಾಣಮಾಡಿದರು. ಅಂತಹ ಮಹಾತ್ಮರ 150 ನೇ ಜಯಂತ್ಯುತ್ಸವದಲ್ಲಿ ಪಾಲ್ಗೊಳ್ಳುವುದೇ ನನ್ನ ಭಾಗ್ಯ ಎಂದು ಆಶೀರ್ವಚನ ನೀಡಿದರು.

ಜಯದೇವ ಜಗದ್ಗುರುಗಳು ಈ ನಾಡಿಗೆ ಕೊಟ್ಟ ಕೊಡುಗೆಯನ್ನು ಸ್ಮರಿಸಲು ಅವರ 150 ನೇ ಜಯಂತೊತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಮುರುಘಾಮಠದ 24 ನೇ ಜಗದ್ಗುರುಗಳಾದ ಜಯದೇವ ಜಗದ್ಗುರುಗಳು ಸಮಾಜದ ಎಲ್ಲಾ ವರ್ಗಗಳಿಗೂ ಉಪಯೋಗವಾಗುವಂತಹ ಕಾರ್ಯಗಳನ್ನು ಮಾಡಿದ್ದಾರೆ. 1924 ರಲ್ಲಿ ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ಮಹಾತ್ಮಗಾಂಧೀಜಿಯವರಿಗೆ ವಚನ ಪುಸ್ತಕಗಳನ್ನು ಕೊಟ್ಟು ಬಸವಣ್ಣನವರ ವಿಚಾರದಾರೆಗಳನ್ನು ಪರಚಯಿಸಿಕೊಟ್ಟವರು, ಜಯದೇವ ಜಗದ್ಗುರುಗಳಾಗಿದ್ದಾರೆಂದು ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ ಹೇಳಿದರು.

ಕಾರಿಗನೂರಿನ ಪ್ರಗತಿಪರ ರೈತ ಶ್ರೀ ತೇಜಸ್ವಿ ವಿ ಪಟೇಲ್ ಮಾತನಾಡಿ ಒಬ್ಬ ರೈತ ನಾಲ್ಕು ತಿಂಗಳು ಬೆಳೆದ ಬೆಳೆಯನ್ನು ಮಾರುಕಟ್ಟೆಯಲ್ಲಿ ಬಂಡವಾಳಗಾರರು ಕೇಳಿದ ಬೆಲೆಗೆ ಮಾರಾಟ ಮಾಡ ಬೇಕಾಗುತ್ತದೆ. ರೈತನಿಗೆ ಯಾರ ಬಯವೂ ಇಲ್ಲ ಆನೆ, ಹುಲಿ, ಚಿರತೆ ಯಂತಹ ಕ್ರೂರ ಪ್ರಾಣಿಗಳಿದ್ದರೂ ರೈತ ಭಯವಿಲ್ಲದೆ ಕೃಷಿ ಮಾಡುತ್ತಾನೆ. ಆದರೆ ಅವನಿಗೆ ಭಯ ಇರುವುದು ಇಂದಿನ ಮಾರುಕಟ್ಟೆಯ ಮೇಲೆ. ಉಣ್ಣೆ ರಕ್ತ ಹೀರುವಂತೆ ರೈತನ ಬೆಳೆಯ ಹಣವನ್ನೆಲ್ಲ ಸಾಲ ಹೀರುತ್ತಿದ್ದೆ ಎಂದರು.

ಈಚಘಟ್ಟದ ರೈತ ಸಿದ್ದವೀರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿ ಚಿತ್ರದುರ್ಗ ಜಿಲ್ಲೆ ಸದಾ ಬರಗಾಲದ ಪ್ರದೇಶ ಮಳೆ ಬಂದರೂ ರೈತರಿಗೆ ತೊಂದರೆ ಬರದೇ ಇದ್ದರೂ ತೊಂದರೆ. ರೈತನ ಬೆಳೆಗೆ ಬೆಂಬಲ ಬೆಲೆ ಇಲ್ಲದ ಕಾರಣ ಸಮಸ್ಯಗಳಿಗೆ ತುತ್ತಾಗುತ್ತಿದ್ದಾನೆ. ಮನಷ್ಯನ ಆಹಾರ ಇಂದು ಕಲುಷಿತವಾಗಿದೆ. ವಿಷದ ಆಹಾರವನ್ನು ನಾವಿಂದು ಸೇವಿಸುತ್ತಿದ್ದೇವೆ. ಇಂದು ಎಲ್ಲಾ ಅಧಿಕಾರಿಗಳು ರೈತನ ಕೃಷಿ ಸಮಸ್ಯೆಗಳಿಗೆ ಗಮನಹರಿಸಬೇಕಿದೆ. ಇಂದು ಎಲ್ಲಾ ಆರೋಗ್ಯ ಸಮಸ್ಯಗಳಿಗೂ ಆಸ್ಪತ್ರಯನ್ನೇ ಅವಲಂಭಿಸುವ ಸ್ಥಿತಿ ಬಂದಿದೆ. ಮಗು ಹುಟ್ಟಿದ ತಕ್ಷಣವೇ ಐ ಸಿ ಯು ನಲ್ಲಿ ಚಿಕಿತ್ಸೆ ಪಡೆಯುವಂತಹ ಪರಿಸ್ಥಿತಿ ಇದೆ. ಎಲ್ಲಾ ರೈತರ ಹೊಲಗಳಿಗೆ ನೀರಿನ ವ್ಯವಸ್ಥೆಯನ್ನು ಮಾಡುವಂತಹ ಜವಾಬ್ದಾರಿ ಸರ್ಕಾರದ್ದು, ಸ್ವಾಮಿ ನಾಥನ್ ವರದಿ ಜಾರಿಗೆಯಾಗಬೇಕು. ಆರೋಗ್ಯಯುತವಾದ ಆಹಾರವನ್ನು ನೀಡುವುದು ನಮ್ಮೆಲ್ಲರ ಮೊದಲ ಆದ್ಯತೆಯಾಗಬೇಕು. ಚಿತ್ರದುರ್ಗದ ಏಕೈಕ ಜೀವನದಿ ವೇದಾವತಿ ನದಿಯನ್ನು ಪುನಃಚೇತನಗೊಳಿಸಿ ಹರಿಯಲು ಬಿಡಬೇಕು. ನಮ್ಮ ಮುಂದಿನ ಮಕ್ಕಳಿಗೆ ಆರೋಗ್ಯ ಪೂರ್ಣವಾದ ಆರೋಗ್ಯ ನೀಡುವುದು ನಮ್ಮ ಕರ್ತವ್ಯ ಎಂದು ತಿಳಿಸಿದರು. ವಸ್ತು ಪ್ರದರ್ಶನದಲ್ಲಿ ತೋಟಗಾರಿಕೆ ಇಲಾಖೆ ಪ್ರಥಮ ಸ್ಥಾನ ಗಳಿಸಿದರೆ ಕೃಷಿ ಇಲಾಖೆ ದ್ವಿತೀಯ ಸ್ಥಾನಗಳಿಸಿದರೆ, ಭದ್ರಾ ಮೇಲ್ದಂಡೆ ಯೋಜನೆಯ ಮಾದರಿಗೆ ಜಲಸಂಪನ್ಮೂಲ ಇಲಾಖೆ ತೃತೀಯ ಸ್ಥಾನ ಗಳಿಸಿತು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಶಾಸಕರಾದ ಶ್ರೀ ಕೆ.ಸಿ ವಿರೇಂದ್ರ (ಪಪ್ಪಿ) ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಪ್ರಗತಿಪರ ರೈತರಾದ ಹಿರಿಯೂರಿನ ಶ್ರೀ ಸಿದ್ಧರಾಮಪ್ಪ , ದೊಣ್ಣೆ ಹಳ್ಳಿಯ ವೈ ಎನ್ ಸಂತೋಷಕುಮಾರ್ ಗಜ್ಜಗಾನಹಳ್ಳಿಯ ಪಿ. ಬಾಗ್ಯಮ್ಮ ಕುರಕಾಲ ಹಟ್ಟಿಯ ಟಿ ರವಿಕುಮಾರ ಇವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ಆಕಾಶವಾಣಿಯ ನವೀನ್ ಮಸ್ಕಲ್ ನಿರೂಪಿಸಿದರು. ಎಸ್.ಜೆ.ಎಂ. ಕನ್ನಡ ಮಾದ್ಯಮಶಾಲೆ ಹಾಗೂ ನಾಟ್ಯ ರಂಜಿನಿ ನೃತ್ಯ ಕಲಾ ಕೇಂದ್ರ ಇವರಿಂದ ಸಾಂಸ್ಕೃತಿಕ ಸಂಭ್ರವು ಜರುಗಿತು.

## ಶರಣ ಸಂಸ್ಕೃತಿ ಉತ್ಸವ: ಬಸವತತ್ವ ಧ್ವಜಾರೋಹಣ

» **ಚಿತ್ರದುರ್ಗ**



ಮೈಸೂರಿನ ಶ್ರೀ ಸಿದ್ಧರಹಳ್ಳಿ ಪರಮಾರ್ಥಗವಿಮಠದಶ್ರೀನಿ.ಪ್ರ.ಸ್ವ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಸಮ್ಮುಖ ವಹಿಸಿ ಮಾತನಾಡಿ ಬಸವಣ್ಣನವರನ್ನು ನಾವು ಉಸಿರಲ್ಲಿ ಉಸಿರಾಗಿಟ್ಟುಕೊಂಡು ಬದುಕಿದವರು. ನಿತ್ಯ ಜೀವನದಲ್ಲಿ ಕೆಟ್ಟದನ್ನುಹೊರಹಾಕಿಬಾವುಟದಂತೆ ಹಗುರವಾಗಿ ಹಾರಾಡಬೇಕು. ಮನಸ್ಸಿನಲ್ಲಿರುವ ದ್ವೇಷವನ್ನು ಹೊರ ಹಾಕಬೇಕು. ಆಗ ಮನುಷ್ಯ ಹಗುರವಾಗುತ್ತಾನೆ. ಎಲ್ಲವು ನೀನೇ ಎಂಬ ಭಾವವಿರಬೇಕು. ಕಿಂಕರತ್ವ ಭಾವವಿರಬೇಕು ಎಂದರು. ಬಸವತತ್ವವನ್ನು ಅಳವಡಿಸಿಕೊಂಡ ಶರಣರು ಅರವಿಂದ ಜತ್ತಿಯವರು ಎಂದರು. ಕಾರ್ಯಕ್ರಮದಲ್ಲಿ ಬಸವತತ್ವ ಧ್ವಜಾರೋಹಣ ನೆರವೇರಿಸಿದ ಬೆಂಗಳೂರಿನ ಬಸವ ಸಮಿತಿಯ ಅಧ್ಯಕ್ಷರಾದ ಶ್ರೀ ಅರವಿಂದ ಜತ್ತಿಯವರಿಗೆ ಗೌರವಸಮರ್ಪಣೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಬಸವತತ್ವ ಧ್ವಜಗೀತೆಯನ್ನು ಹಾಡಲಾಯಿತು. ಕಾರ್ಯಕ್ರಮದಲ್ಲಿ ಡಾ. ಬಸವಕುಮಾರ ಸ್ವಾಮೀಜಿ ಹರಗುರು ಚರಮೂರ್ತಿಗಳು .. ಷಣ್ಮುಖಪ್ಪ, ವಿರೇಶಣ್ಣ, ಹಾಗೂ ಮಠದ ಸದ್ಭಕ್ತರು ಹಾಜರಿದ್ದರು.

## ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗಕ್ಕೆ ನೇಮಕ



» **ಚಿತ್ರದುರ್ಗ**

ರಾಜ್ಯದಬಡಜನತೆಗೆಮುಖ್ಯಮಂತ್ರಿಸಿದ್ಧರಾಮಯ್ಯನವರುನೀಡುತ್ತಿರುವ ಉಚಿತ ಗ್ಯಾರೆಂಟಿಗಳನ್ನು ನೋಡಿ ಸಹಿಸಲು ಆಗದೆ ಕೋಮುವಾದಿ ಬಿಜೆಪಿ.ಯವರು ಕಾಂಗ್ರೆಸ್ ಪಕ್ಷವನ್ನು ಛಿದ್ರಗೊಳಿಸುವ ಪ್ರಯತ್ನ ಮಾಡುತ್ತಿರುವುದರ ವಿರುದ್ದ ಕಾರ್ಯಕರ್ತರು ಎಚ್ಚೆತ್ತುಕೊಳ್ಳಬೇಕೆಂದು ಚಿತ್ರದುರ್ಗ ನಗರಾಭಿವೃದ್ಧಿ ಪ್ರಾದಿಕಾರದ ಮಾಜಿ ಅಧ್ಯಕ್ಷ ಆರ್.ಕೆ.ಸರ್ದಾರ್ ತಿಳಿಸಿದರು. ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಚಿತ್ರದುರ್ಗ ಗ್ರಾಮಾಂತರ ಅಧ್ಯಕ್ಷರಾಗಿ ನೇಮಕವಾಗಿರುವ ಎಂ.ನಿಖಿಲ್, ಜಂಟಿ ಕಾರ್ಯದರ್ಶಿ ಅಮೀನಾಭಾನು, ಹೊಳಲ್ಕೆರೆ ಗ್ರಾಮಾಂತರ ಕಾಂಗ್ರೆಸ್ ಕಾರ್ಮಿಕ ವಿಭಾಗ ಅಧ್ಯಕ್ಷರಾಗಿ ನೇಮಕವಾಗಿರುವ ಖಲೀಲ್ ಖಲಂದರ್ ಇವರುಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

**ಪ್ರಮುಖ ಸುದ್ದಿ**

# ಬದುಕು ಬಿಟ್ಟು ಯೋಗವಿಲ್ಲ, ಯೋಗ ಬಿಟ್ಟು ಬದುಕು ಇಲ್ಲ

» **ಚಿತ್ರದುರ್ಗ**



ಬೆಂಗಳೂರಿನಬಸವಸಮಿತಿಅಧ್ಯಕ್ಷರಾದ ಶ್ರೀ ಅರವಿಂದ ಜತ್ತಿ ಲಿಂಗಯೋಗದ ವೈಜ್ಞಾನಿಕತೆಯ ಬಗ್ಗೆ ಮಾತನಾಡುತ್ತಾ ಬದುಕೇ ಒಂದು ಯೋಗ, ಬದುಕು ಬಿಟ್ಟು ಯೋಗವಿಲ್ಲ. ಯೋಗ ಬಿಟ್ಟು ಬದುಕು ಇಲ್ಲ. ಯೋಗವೆಂದರೆ ದೈಹಿಕ ಯೋಗಕ್ಕೆ ಒಳಗಾಗುತ್ತೇವೆ. ಆದರೆ ಬಸವತತ್ವದಲ್ಲಿ ಬದುಕೇ ಒಂದು ಯೋಗ ಶಿವಯೋಗವೇ ಬೇರೆ ದೈಹಿಕ ಯೋಗವೇ ಬೇರೆ, ಎನ್ನುವುದು ಶರಣರ ದೃಷ್ಟಿಯಲ್ಲಿ ಅಂತರಂಗ ಮತ್ತು ಬಹಿರಂಗಗಳ ಒಂದು ಸಂಗಮ. ಅಂತರಂಗ ವಿಕಾಸಕ್ಕೆ ಬಸವಣ್ಣನವರು ನಮಗೆ ಇಷ್ಟ ಲಿಂಗವನ್ನು ಕೊಟ್ಟರೆ ಬಹಿರಂಗದ ವಿಕಾಸಕ್ಕೆ ನೀತಿ ಮೌಲ್ಯಗಳನ್ನು ಕೊಟ್ಟಿದ್ದಾರೆ. ಕೂಡಲ ಸಂಗಮ ದೇವ ಎಂಬ ಅಂಕಿತ ನಾಮವನ್ನು ಇಟ್ಟುಕೊಂಡಿದ್ದಾರೆ. ಅನೇಕ ವಚನಗಳಲ್ಲಿ ಇದಕ್ಕೆ ಉತ್ತರ ಕೊಡುತ್ತಾ ಬಂದಿದ್ದಾರೆ.

ಇದನ್ನು ವೈಜ್ಞಾನಿಕವಾಗಿ ನೋಡುವುದಾದರೆ ಇದು ಸಹ ಒಂದು ಬೇರೆ ಧರ್ಮದಂತೇ ಔಪಚಾರಿಕತೆಯಿಂದ ಕೂಡಿದ್ದಾಗುತ್ತದೆ. ಇದೇ ಅಂತರಂಗ ಶುದ್ಧಿ ಇದೇ ಬಹಿರಂಗ ಶುದ್ಧಿ ಇದೇ ಕೂಡಲ ಸಂಗಮ ನೊಲಿಸುವ ಪರಿ ಎಂದಿದ್ದಾರೆ. ಕಳಬೇಡ ಕೊಲಬೇಡ ಹುಸಿಯ ನುಡಿಯಲು ಬೇಡ ಎಂಬ ವಚನದಲ್ಲಿ ಶರಣರು ಬೇಡ ಬೇಡ ಎಂದು ಹೇಳುತ್ತಾ ಇದನ್ನೇ ಮಾಡುತ್ತಾ ಬಂದಿದ್ದಾರೆ.

ನಿಜದೃಷ್ಟಿ ಕೋನದಲ್ಲಿ ಅಂತರಂಗ ಶುದ್ಧಿ ಬಹಿರಂಗ ಶುದ್ಧಿ ಎರಡನ್ನು ಅಳವಡಿಸಿಕೊಂಡು ಕೂಡಲು ಆಗುವ ಸಂಗಮವೇ ಕೂಡಲ ಸಂಗಮದೇವ. ಸಂಸ್ಕೃತಿಗೆ ವೈರುದ್ಯವಾದ ಚಿಂತನೆಗಳು ಬಂದಾಗ ಎದುರಿಸುವ ಶಕ್ತಿ ನಮ್ಮ ಪೂಜ್ಯರ ಮಾರ್ಗದರ್ಶನದಿಂದ ಮಾತ್ರ ಸಾಧ್ಯ. ವಿದೇಶದ ಹತ್ತು ಭಾಷೆಗಳು ಅನುವಾದ ಮಾಡುವ ಕಾರ್ಯದಲ್ಲಿ ನಾನು ತೊಡಗಿದ್ದೇನೆ. ಮರುಘಾಮಠದ ಪರಂಪರೆಬಹಳಪವಿತ್ರವಾದುದು. ಇಂತಹ ಪರಂಪರೆಯುಳ್ಳ ಮುರುಘಾಮಠದ ಬಸವತತ್ವಧ್ವಜಾರೋಹಣಅವಕಾಶನೀಡಿದ ಡಾ. ಬಸವಕುಮಾರ ಸ್ವಾಮಿಜಿಯವರಿಗೆ ನಾನು ಅಬಾರಿಯಾಗಿರುತ್ತೇನೆ ಎಂದು ನುಡಿದರು.

ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿಯವರು ಮಾತನಾಡಿ ನಾಡಿನ ಯಾವ ಮಠಗಳಲ್ಲಿ ಬಸತತ್ವಗಳು ಕಾರ್ಯಕ್ರಮಗಳು ನಡೆಯುತ್ತವೆ ಎಂದು ತಿಳಿದುಕೊಂಡು ಅಲ್ಲಿಗೆ ಹೋಗಿ ಅಧ್ಯಯನ ಮಾಡಿ ಅವುಗಳನ್ನು ವಿಜಯ ಸಂದೇಶ ಪತ್ರಿಕೆಯ ಮೂಲಕ ನಾಡಿನ ಜನರಿಗೆ ಮುಟ್ಟಿಸುವ ಕೆಲಸವನ್ನು ಶ್ರೀ ಅರವಿಂದ ಜತ್ತಿಯವರು ಮಾಡುತ್ತಿದ್ದಾರೆ ಎಂದರು.

ದಾವಣಗೆರೆಯ ವಿರಕ್ತ ಮಠದ ಡಾ. ಬಸವಪ್ರಭು ಸ್ವಾಮೀಜಿ ಶಿವಯೋಗ ಪ್ರಾತ್ಯಾಕ್ಷಿಕೆ ನೀಡುತ್ತಾ ಮಾತನಾಡಿ ಸಾಮೂಹಿಕ ಶಿವಯೋಗದ ಶಕ್ತಿ ಅಪಾರ, ಒಳ್ಳೆಯ ಉದ್ದೇಶದಿಂದ ನಾವು ಪ್ರಾರ್ಥನೆ ಮಾಡಿದರೆ ನಮ್ಮೊಳಗಿನ ಇಷ್ಟಲಿಂಗ ಆಶೀರ್ವದಿಸುತ್ತಾನೆ. ಆದ್ದರಿಂದ ಪ್ರತಿ ನಿತ್ಯ ಶಿವಯೋಗ ಮಾಡೋಣ ನಮ್ಮ ಕಷ್ಟವನ್ನು ಲಿಂಗದ ಮುಂದೆ ಹೇಳೋಣ ಆ ಕಷ್ಟಗಳನ್ನು ನಿವಾರಣೆ ಮಾಡುವ ಶಕ್ತಿ ಶಿವಯೋಗದಲ್ಲಿದೆ ಎಂದರು. ಧ್ಯಾನದ ಮೂಲಕ ಸಮಾಧಾನವನ್ನು ಪಡೆಯೋಣ ಇಷ್ಟ ಲಿಂಗಕ್ಕೆ ವಿಭೂತಿ ಧಾರಣೆ ಮಾಡಿ ವಚನಾಭಿಷೇಕ ಮಾಡಿ ಭಾವ ಭಕ್ತಿಯಿಂದ ಶಿವಯೋಗ ನಡೆಸಿದರ. ಪ್ರತಿ ನಿತ್ಯ ಧ್ಯಾನ ಮಾಡುವುದರಿಂದ ಬದುಕಿನಲ್ಲಿ ಸುಖ, ಶಾಂತಿ ಲಭಿಸುತ್ತದೆ. ವಿಶ್ವಕ್ಕೆ ಕಲ್ಯಾಣವಾಗಲೆಂದು ಇಷ್ಟಲಿಂಗವನ್ನು ಪ್ರಾರ್ಥಿಸೋಣ ಎಂದರು.

ಕೊಡ್ಲಿಪೇಟೆಯ ಶ್ರೀ ಕಲ್ಲಳ್ಳಿ ಮಠದ ಶ್ರೀ ರುದ್ರಮುನಿಸ್ವಾಮಿಗಳು, ಚಿತ್ರದುರ್ಗದ ಛಲವಾದಿ ಗುರುಪೀಠದ ಶ್ರೀ ಬಸವನಾಗೀದೇವ ಸ್ವಾಮಿಗಳು, ತಂಗಡಗಿ ಹಡಪದ ಅಪ್ಪಣ್ಣದೇವರ ಗುರುಪೀಠದ ಶ್ರೀ ಅನ್ನದಾನಿ ಭಾರತೀಪ್ರಿಯ ಅಪ್ಪಣ್ಣ ಸ್ವಾಮಿಗಳು ತೆಲಸಂಗದ ಶ್ರೀ ಕುಂಬಾರ ಗುಂಡಯ್ಯ ಗುರುಪೀಠದ ಶ್ರೀ ಬಸವ ಕುಂಬಾರ ಗುಂಡಯ್ಯ ಸ್ವಾಮಿಗಳು ಸಮಾರಂಭದ ಸಮ್ಮುಖವಹಿಸಿದ್ದರು.

ಕಾರ್ಯಕ್ರಮದಲ್ಲಿ ಹಳಿಯಾಳ ಬಸವಕೇಂದ್ರದ ಸುಮಂಗಲ, ಕಲಬುರ್ಗಿ ಜಾ.ಲಿಂ. ಮಹಿಳಾ ಘಟಕದ ಆಧ್ಯಕ್ಷರಾದ ಶರಣೆ ನಳಿನಿ ಮಹಾಗಾಂವಕರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಜಮುರಾ ಕಲಾವಿದರು ಪ್ರಾರ್ಥಿಸಿದರೆ ಡಾ. ಬಸವಕುಮಾರ ಸ್ವಾಮೀಜಿವರು ಸ್ವಾಗತ, ನಿರೂಪಣೆ ಹಾಗೂ ಶರಣು ಸಮರ್ಪಣೆ ನೆರವೇರಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T